ಕನ್ನಡ ದಿನಪತ್ರಿಕೆ

23 ಮಾರ್ಚ | ಶನಿವಾರ

23 MARCH 2024


# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 31 ಪುಟ – 4 | RNI.KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಲೋಕಸಭೆ ಚುನಾವಣೆ: ರಾಜ್ಯದಲ್ಲಿ 9.64 ಕೋಟಿ ರೂ. ನಗದು ವಶ

ಬೆಂಗಳೂರು: ಲೋಕಸಭೆ ಚುನಾವಣೆಗೆ ನೀತಿ ಸಂಹಿತೆ ಜಾರಿಗೆ ಬಂದ ನಂತರ ಯಾವುದೇ ಅಕ್ರಮ ನಡೆಯದಂತೆ ಕ್ರಮ ಕೈಗೊಂಡಿರುವ ಚುನಾವಣಾಧಿಕಾರಿಗಳು, ಪ್ರತಿಯೊಂದು ವಾಹನದ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ. ರಾಜ್ಯದಲ್ಲಿ ಕಳೆದ 24 ಗಂಟೆಗಳಲ್ಲಿ 2.75 ಕೋಟಿ ರೂಪಾಯಿ ನಗದು ವಶಪಡಿಸಿಕೊಳ್ಳಲಾಗಿದೆ ಎಂದು ಚುನಾವಣಾ ಆಯೋಗ ಶುಕ್ರವಾರ ತಿಳಿಸಿದ್ದಾರೆ. ಕರ್ನಾಟಕದಲ್ಲಿ ಮಾರ್ಚ್ 16 ರಿಂದ ಇಂದಿನವರೆಗೆ ಒಟ್ಟು 9.64 ಕೋಟಿ ರೂ. ವಶಪಡಿಸಿಕೊಳ್ಳಲಾಗಿದೆ. ಕರ್ನಾಟಕದ 28 ಕ್ಷೇತ್ರಗಳಿಗೆ ಏಪ್ರಿಲ್ 26 ಮತ್ತು ಮೇ 7 ರಂದು ಎರಡು ಹಂತಗಳಲ್ಲಿ ಸಾರ್ವತ್ರಿಕ ಚುನಾವಣೆ ನಡೆಯಲಿದೆ.

## ನಾವು ನಡೆಸಿರುವ ಎಲ್ಲಾ ಸಮೀಕ್ಷೆಗಳಲ್ಲೂ ಬೆಳಗಾವಿಯಲ್ಲಿ ಉತ್ತಮ ಪ್ರತಿಕ್ರಿಯೆ ಬಂದಿದೆ; ಒಗ್ಗಟ್ಟಾಗಿ ಚುನಾವಣೆ ಮಾಡಿದರೆ ಗೆಲುವು ಖಚಿತ: ಸಿ.ಎಂ.ಸಿದ್ದರಾಮಯ್ಯ

ಬೆಂಗಳೂರು: ನಾವು ನಡೆಸಿರುವ ಎಲ್ಲಾ ಸಮೀಕ್ಷೆಗಳಲ್ಲೂ ಬೆಳಗಾವಿಯಲ್ಲಿ ಉತ್ತಮ ಪ್ರತಿಕ್ರಿಯೆ ಬಂದಿದೆ. ಒಗ್ಗಟ್ಟಾಗಿ ಚುನಾವಣೆ ಮಾಡಿ. ಉತ್ತರ ಕನ್ನಡ ಜಿಲ್ಲೆ ಸೇರಿ ಬೆಳಗಾವಿಯ ಜಿಲ್ಲೆಗಳಿಗೆ ಒಳಪಡುವ ಮೂರೂ ಲೋಕಸಭಾ ಕ್ಷೇತ್ರಗಳಲ್ಲೂ ಖಚಿತವಾಗಿ ಗೆಲುವು ಸಾಧಿಸಬಹುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಕಾವೇರಿಯಲ್ಲಿ ನಡೆದ ಬೆಳಗಾವಿ ಜಿಲ್ಲೆಯ ಸಚಿವರು, ಶಾಸಕರು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಮುಖಂಡರ ಸಭೆಯಲ್ಲಿ ಮುಖ್ಯಮಂತ್ರಿಗಳು ಬೆಳಗಾವಿಯ ಎರಡು ಲೋಕಸಭಾ ಕ್ಷೇತ್ರ ಹಾಗೂ ಬೆಳಗಾವಿ ಜಿಲ್ಲೆಯ ಎರಡು ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿರುವ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಲ್ಲೂ ಗೆಲುವು ಸಾಧಿಸಬಹುದಾಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಐದು ಗ್ಯಾರಂಟಿ ಯೋಜನೆಗಳು ಬೆಳಗಾವಿ ಜಿಲ್ಲೆಯ ಲಕ್ಷಾಂತರ ಕುಟುಂಬಗಳ ಮತ್ತು ಮಹಿಳೆಯರ



ಬದುಕಿನ ಸಂಕಟವನ್ನು ಕಡಿಮೆ ಮಾಡಿವೆ. ಇದಕ್ಕಾಗಿ ಯುವತಿಯರು ಮತ್ತು ಮಹಿಳೆಯರು ಶೇ80 ರಷ್ಟು ನಮ್ಮ ಪರವಾಗಿ ಇದ್ದಾರೆ ಎನ್ನುವ ಸಕಾರಾತ್ಮಕ ವರದಿ ಸಮೀಕ್ಷೆಗಳಿಂದ ಹೊರ ಬಂದಿವೆ. ನಾವು ಜನರ ಮನೆ ಬಾಗಿಲಿಗೆ ಹೋಗಿ ಪ್ರತೀ ತಿಂಗಳು ಪ್ರತೀ ಕುಟುಂಬಕ್ಕೆ 5-6 ಸಾವಿರ ರೂಪಾಯಿ ಕೊಡುತ್ತಿರುವ ಮತ್ತು ವರ್ಷಕ್ಕೆ 50-60 ಸಾವಿರ ಪ್ರತಿ ಕುಟುಂಬದ ಖಾತೆಗೆ ಜಮೆ ಆಗುತ್ತಿರುವುದನ್ನು ಮನವರಿಕೆ ಮಾಡಿಸಿ, ಜನರ ನಡುವೆ ಗಟ್ಟಿಯಾಗಿ ನಿಂತು ಗೆದ್ದು ಬನ್ನಿ ಎಂದು ಸಿಎಂ ಕರೆ ನೀಡಿದರು.

ಮುಖ್ಯಮಂತ್ರಿಗಳ ಭರವಸೆಯ ಮಾತುಗಳಿಗೆ ಸ್ಪಂದಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು, ಬೆಳಗಾವಿಯಲ್ಲಿ ನಾವು ಎಲ್ಲರೂ ಒಟ್ಟಾಗಿ ಅಖಾಡಕ್ಕೆ ಇಳಿದಿದ್ದೇವೆ. ಎರಡೂ ಕ್ಷೇತ್ರದಲ್ಲೂ ಗೆದ್ದು ಬಂದು ಈ ಗೆಲುವನ್ನು ನಿಮಗೆ ಅರ್ಪಿಸುತ್ತೇವೆ ಎಂದರು.

**ಉತ್ತರ ಕನ್ನಡದಲ್ಲಿ ಬದಲಾವಣೆ ವಾತಾವರಣ**

ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಲ್ಲೂ ಜನರ ಈ ಬಾರಿ ಬದಲಾವಣೆ ಬಯಸಿರುವುದು, ಹಿಂದಿನ ಸಂಸದರು ಕ್ಷೇತ್ರಕ್ಕೆ ಏನೂ ಮಾಡಿಲ್ಲ ಎನ್ನುವ ಅಭಿಪ್ರಾಯಗಳು ಉತ್ತರ ಕನ್ನಡ ಜಿಲ್ಲೆಯ ಜನರ ಆಕ್ರೋಶಕ್ಕೆ ಕಾರಣವಾಗಿದೆ ಎನ್ನುವ ಅಭಿಪ್ರಾಯಗಳು ಸಮೀಕ್ಷೆಗಳಲ್ಲಿ ವ್ಯಕ್ತವಾಗಿವೆ.

ಹೀಗಾಗಿ ಇಲ್ಲೂ ಗೆಲುವಿನ ಅವಕಾಶಗಳು ಇವೆ ಎನ್ನುವ ಬಗ್ಗೆಯೂ ಸಭೆಯಲ್ಲಿ ಹಲವರು ಅಭಿಪ್ರಾಯ ವ್ಯಕ್ತಪಡಿಸಿದರು.

ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್, ಸತೀಶ್ ಜಾರಕಿಹೊಳಿ ಸೇರಿ ಮಾಜಿ ಸಚಿವರಾದ ಲಕ್ಷ್ಮಣ್ ಸವದಿ ಮತ್ತು ಜಿಲ್ಲೆಯ ಎಲ್ಲಾ ಶಾಸಕರು, ಮಾಜಿ ಸಚಿವರು, ಮಾಜಿ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ 40 ಕ್ಕೂ ಹೆಚ್ಚು ಮಂದಿ ಜಿಲ್ಲಾ ಮುಖಂಡರು ಸಭೆಯಲ್ಲಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

## ಉತ್ತಮ ವಾತಾವರಣವಿದೆ, ಬೆಳಗಾವಿ ನಮ್ಮದಾಗಲಿದೆ: ಡಿ.ಕೆ.ಶಿವಕುಮಾರ ವಿಶ್ವಾಸ



ಬೆಂಗಳೂರು: ಈ ಬಾರಿ ಬೆಳಗಾವಿಯಲ್ಲಿ ಉತ್ತಮ ವಾತಾವರಣವಿದ್ದು, ಕಾಂಗ್ರೆಸ್ ಪರ ಅಲೆ ಇದೆ ಎನ್ನುವುದು ನಮ್ಮ ಸಮೀಕ್ಷೆಗಳಿಂದ ಸ್ಪಷ್ಟವಾಗಿದೆ. ಹಾಗಾಗಿ ಬೆಳಗಾವಿ, ಚಿಕ್ಕೋಡಿ ಮತ್ತು ಕೆನರಾ ಲೋಕಸಭಾ ಕ್ಷೇತ್ರಗಳು ಕಾಂಗ್ರೆಸ್ ಪಕ್ಷದ ವಶಕ್ಕೆ ಬರಲಿವೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಶುಕ್ರವಾರ ತಮ್ಮನ್ನು ಭೇಟಿ ಮಾಡಿದ ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಬಳಗದೊಂದಿಗೆ ಅವರು ಮಾತನಾಡಿದರು. ಲೋಕಸಭೆಯ ಚುನಾವಣೆಯ ಕುರಿತು ಸುದೀರ್ಘ ಸಮಾಲೋಚನೆ ನಡೆಸಿದ ಡಿ.ಕೆ.ಶಿವಕುಮಾರ, ವಿಧಾನ ಸಭೆ ಚುನಾವಣೆಯಲ್ಲಿ ಬೆಳಗಾವಿಯಲ್ಲಿ ನಾವು ಅತ್ಯಧಿಕ ಸ್ಥಾನ ಗೆದ್ದಿದ್ದೇವೆ. ಅದೇ ಒಗ್ಗಟ್ಟು ಮತ್ತು ಪರಿಶ್ರಮ ಹಾಕಿ ಮೂರೂ ಕ್ಷೇತ್ರಗಳನ್ನು ಗೆಲ್ಲಿಸಬೇಕು. ನಮ್ಮಿಂದ ಯಾವುದೇ ಸಹಕಾರ ಬೇಕಿದ್ದರೂ ನೀಡಲು ಸಿದ್ಧರಿದ್ದೇವೆ. ಅತ್ಯಂತ ವ್ಯವಸ್ಥಿತವಾಗಿ ಚುನಾವಣೆ ಎದುರಿಸಿ ಎಂದು ಸಲಹೆ ನೀಡಿದರು.

ಪ್ರತಿಬಾರಿ ಒಂದೊಂದು ಅಲೆಯನ್ನೇ ನಂಬಿಕೊಳ್ಳುವ ಬಿಜೆಪಿಗೆ ಈ ಬಾರಿ ಯಾವ ಅಲೆಯೂ ಇಲ್ಲ. ಈಗ ಏನಿದ್ದರೂ ಕಾಂಗ್ರೆಸ್ ಅಲೆ. ಗ್ಯಾರಂಟಿಗಳ ಮೂಲಕ ಜನರ ಸಮಸ್ಯೆಗೆ ಸ್ಪಂದಿಸಿರುವ ಕಾಂಗ್ರೆಸ್ ಪಕ್ಷವನ್ನು ಜನರು ಬೆಂಬಲಿಸಲಿದ್ದಾರೆ ಎಂದು ಡಿ.ಕೆ.ಶಿವಕುಮಾರ ಹೇಳಿದರು. ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್, ಜಿಲ್ಲೆಯ ಶಾಸಕರು, ಮುಖಂಡರು ಉಪಸ್ಥಿತರಿದ್ದರು.

## ಒಬ್ಬೊಬ್ಬ ಶಾಸಕನಿಗೂ ಬಿಜೆಪಿಯಿಂದ 50 ಕೋಟಿ ಆಫರ್: ಸಿಎಂ ಗಂಭೀರ ಆರೋಪ

ಬೆಂಗಳೂರು: ಚುನಾವಣಾ ಸಮಯದಲ್ಲಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗಂಭೀರ ಆರೋಪವೊಂದನ್ನು ಮಾಡಿದ್ದಾರೆ. ಒಬ್ಬೊಬ್ಬ ಶಾಸಕನಿಗೂ ಬಿಜೆಪಿಯವರು 50 ಕೋಟಿ ಆಫರ್ ಮಾಡುತ್ತಿದ್ದಾರೆ ಎಂದು ಸಿಎಂ ಆರೋಪಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಿಜೆಪಿಯವರು ಭ್ರಷ್ಟಾಚಾರದ ಪಿತಾಮಹರು. ಆಪರೇಷನ್ ಕಮಲ ಶುರುಮಾಡಿದವರು. ಒಬ್ಬೊಬ್ಬ ಎಂ-ಎಲ್ಎಗೆ 50 ಕೋಟಿ ಆಫರ್ ಮಾಡ್ತಾರೆ. ನಾವೇ ಎಲೆಕ್ಷನ್ ಮಾಡಿಕೊಳ್ಳುತ್ತೇವೆ ಬನ್ನಿ ಅಂತಾರೆ. ಯಾವ ಹಣ ಇದು, ಬ್ಲಾಕ್ ಮನಿ ಅಲ್ವ ಇದು ಎಂದು ಸಿಎಂ ಪ್ರಶ್ನಿಸಿದರು.



ರಾಜಕೀಯ ಪಕ್ಷಗಳ ಕತ್ತು ಹಿಸುಕುವ ಕೆಲಸ ಮಾಡುತ್ತಿದ್ದಾರೆ. ಇದು ಅತ್ಯಂತ ಖಂಡನೀಯ, ಜನಾಭಿಪ್ರಾಯ, ಸಂವಿಧಾನಕ್ಕೆ ವಿರುದ್ಧವಾದ ನಡೆ. ಚುನಾವಣಾ ಸಂದರ್ಭದಲ್ಲಿ ಈ ರೀತಿ ಮಾಡಿದರೆ , ಬಿಜೆಪಿಯವ್ರಿಗೆ ಸೋಲಿನ ಭೀತಿ ಶುರುವಾಗಿದೆ, ಭೀತಿಯಿಂದ ರಾಜ-ಕೀಯ ಪಕ್ಷಗಳ ನಿಷ್ಕ್ರೀಯಗೊಳಿಸುವ ಕೆಲಸ. ಬಿಜೆಪಿ ಖಾತೆಗೆ ಎಷ್ಟು ಹಣ ಬಂದಿದೆ, ಅವರ ಖಾತೆಯನ್ನೂ ಸೀಜ್ ಮಾಡಬೇಕಲ್ವ. ಶ್ರೀಮಂತರೆಲ್ಲಾ ವಿಪಕ್ಷಗಳಲ್ಲೇ ಇದ್ದಾರಾ, ಬಿಜೆಪಿಯಲ್ಲಿ ಯಾರೂ ಇಲ್ವ ಎಂದು ಮರುಪ್ರಶ್ನೆ ಹಾಕಿದರು.

ಜನತೆಯ ಅಭಿಪ್ರಾಯಕ್ಕೆ ವಿರುದ್ಧ ನಡೆದುಕೊಳ್ಳುತ್ತಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಈ ರೀತಿ ಮಾಡಿದ್ರೆ ಒಪ್ಪಲು ಸಾಧ್ಯವಿಲ್ಲ. ಅವರಿಗೆ ಸೋಲುವ ಭೀತಿ ಶುರುವಾಗಿದೆ. ಸೋಲಿನ ಭೀತಿಯಿಂದ ಪಕ್ಷದ ಖಾತೆಗಳನ್ನ ಸ್ಥಗಿತಮಾಡಿದ್ದಾರೆ. ಬಿಜೆಪಿಯವರಿಗೂ ಫಂಡ್ ಬಂದಿದೆ, ಅವರ ಖಾತೆಗಳನ್ನ ಯಾಕೆ ಸ್ಥಗಿತ ಮಾಡಿಲ್ಲ. ಇಡಿ, ಐಟಿ ವಿರೋಧ ಪಕ್ಷಗಳ ನಾಯಕರ ಮೇಲೆ ದಾಳಿ ಮಾಡುತ್ತವೆ. ಸಂಸದೀಯ ವ್ಯವಸ್ಥೆಯನ್ನು ಬಿಜೆಪಿ ನಾಶ ಮಾಡುತ್ತಿದೆ. ಭಾವನಾತ್ಮಕ ವಿಚಾರಗಳನ್ನು ಎಷ್ಟು ದಿನ ಹೇಳಲು ಸಾಧ್ಯ? ಎಂದರು.

ಸಿಎಎ, ರಾಮಮಂದಿರ ಎಷ್ಟು ಸರಿ ಹೇಳಲು ಸಾಧ್ಯ?. ಪ್ರಜಾಪ್ರಭುತ್ವಕ್ಕೆ ಧಕ್ಕೆ ಬಂದಾಗ ಭಾರತ ಮತದಾರರು ತಕ್ಕ ಶಾಸ್ತಿ, ಪಾಠ ಕಲಿಸುತ್ತಾರೆ. ಈ ಬಾರಿ ತಕ್ಕ ಪಾಠ ಕಲಿಸುತ್ತಾರೆ ಎಂಬ ವಿಶ್ವಾಸ ನನಗಿದೆ. ರಾಜ್ಯದಲ್ಲಿ 20 ಸ್ಥಾನ ಗೆದ್ದೇ ಗೆಲ್ಲುತ್ತೇವೆ. ಇಡಿ, ಐಟಿ, ಚುನಾವಣೆ ಆಯೋಗ ಸರ್ಕಾರ ಹೇಳಿದಂಗೆ ಮಾಡುವ ರೀತಿಯಲ್ಲಿ ಮಾಡಿದ್ದಾರೆ. ಖಾತೆಗಳನ್ನ ಸ್ಥಗಿತ ಮಾಡಿರುವ ವಿಚಾರದಲ್ಲಿ ಚುನಾವಣೆ ಆಯೋಗ ಮಧ್ಯಪ್ರವೇಶ ಮಾಡಬೇಕು. ಮಧ್ಯಪ್ರವೇಶ ಮಾಡಿ ಮರಳಿಸಿ ಕೊಡಬೇಕು ಎಂದು ಸಿದ್ದರಾಮಯ್ಯ ಕಿಡಿಕಾರಿದರು.

## ತಪಾಸಣೆ: 5.30 ಕೋಟಿ ರೂ. ವಶಕ್ಕೆ

ರಾಮನಗರ: ಜಿಲ್ಲೆಯ ಹೆಜ್ಜಾಲ ಬಳಿಯ ಕಣಮಿಣಕೆ ಟೋಲ್ ಬಳಿ ಸೂಕ್ತ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 5.30 ಕೋಟಿ ರೂ. ನಗದು ಹಣವನ್ನ ವಶಕ್ಕೆ ಪಡೆಯಲಾಗಿದೆ.

ಲೋಕಸಭಾ ಚುನಾವಣೆ ಹಿನ್ನಲೆ ಯಾವುದೇ ಅಕ್ರಮ ನಡೆಯದಂತೆ ಕ್ರಮ ಕೈಗೊಂಡಿರುವ ಚುನಾವಣಾಧಿಕಾರಿಗಳು, ಪ್ರತಿಯೊಂದು ವಾಹನದ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ. ಅದರಂತೆ ಶುಕ್ರವಾರ



(ಮಾ.22) ತಪಾಸಣೆ ವೇಳೆ ಕಂತೆ ಕಂತೆ ನೋಟು ಪತ್ತೆಯಾಗಿದ್ದು, ಬ್ಯಾಂಕಿಗೆ ಸೇರಿರುವ ಹಣ ಎಂದು ವಾಹನ ಮಾಲೀಕರು ಹೇಳುತ್ತಿದ್ದಾರೆ. ಈ ಕುರಿತು ಸಂಬಂಧಪಟ್ಟ ಬ್ಯಾಂಕ್ ದಾಖಲೆ ಕೇಳಿರುವ ಬಿಡದಿ ಪೊಲಿಸರು, ಸಮರ್ಪಕ ದಾಖಲೆಗಾಗಿ ಕಾಯುತಿದ್ದಾರೆ.

## ಬೆಳಗಾವಿ: 1.50 ಲಕ್ಷ ನಗದು ಜಪ್ತಿ

ಬೆಳಗಾವಿ: ಏರ್ಪೋರ್ಟ್‌ನಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 1ಲಕ್ಷ 50 ಸಾವಿರ ನಗದನ್ನು ಚುನಾವಣಾಧಿಕಾರಿಗಳು ಜಪ್ತಿ ಮಾಡಿದ್ದಾರೆ.

ಬೆಳಗಾವಿಯಿಂದ ದೆಹಲಿಗೆ ಕೊಂಡೊಯ್ಯುತ್ತಿದ್ದಾಗ ತಪಾಸಣೆ ನಡೆಸಿ ವಶಕ್ಕೆ ಪಡೆಯಲಾಗಿದೆ. ಬೆಳಗಾವಿ ಮೂಲದ ಜಸ್ವೀರ್ ಸಿಂಗ್ ಎಂಬಾತ, 2 ಲಕ್ಷ ಇಟ್ಟುಕೊಂಡು ದೆಹಲಿಗೆ ಹೊರಟಿದ್ದ. ಇನ್ನುವಿಮಾನದಲ್ಲಿ 50 ಸಾವಿರ ಕೊಂಡೊಯ್ಯಲು ಮಾತ್ರ ಅವಕಾಶವಿದ್ದು, ಉಳಿದ 1.50 ಲಕ್ಷ ಹಣವನ್ನ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

## ಮೇಕೆದಾಟು ಕಟ್ಟಲೆಂದೇ ನೀರಾವರಿ ಸಚಿವನಾಗಿದ್ದೇನೆ, ಕಟ್ಟುವುದು ಗ್ಯಾರಂಟಿ: ಡಿಕೆ.ಶಿವಕುಮಾರ್



ಬೆಂಗಳೂರು: ತಮಿಳುನಾಡು ಏನಾದರೂ ಮಾಡಿಕೊಳ್ಳಲಿ. ಮೇಕೆದಾಟು ಅಣೆಕಟ್ಟು ಕಟ್ಟಲೆಂದೇ ನಾನು ಜಲಸಂಪನ್ಮೂಲ ಇಲಾಖೆಯ ಜವಾಬ್ದಾ-ರಿಯನ್ನು ತೆಗೆದುಕೊಂಡಿದ್ದೇನೆ. ಅಣೆಕಟ್ಟು ಕಟ್ಟುವುದು ಖಚಿತ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶುಕ್ರವಾರ ಹೇಳಿದರು.

ಡಿಎಂಕೆ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಮೇಕೆದಾಟು ಅಣೆಕಟ್ಟು ಕಟ್ಟಲು ಬಿಡುವುದಿಲ್ಲ ಎಂದು ಹೇಳಿರುವ ಬಗ್ಗೆ ಸುದ್ದಿಗಾರೊಂದಿಗೆ ಮಾತನಾಡಿ ಪ್ರತಿಕ್ರಿಯಿಸಿದ ಅವರು, ಅವರ ಹೋರಾಟ ಅವರು ಮಾಡಲಿ. ಕಾವೇರಿ ನೀರು ನಿರ್ವಹಣಾ ಸಮಿತಿಗೆ ನೀರಿನ ಸಮಸ್ಯೆಯ ಅರಿವಿದೆ. ಅವರು ನಮಗೆ ನ್ಯಾಯ ಕೊಡಲೇಬೇಕು ಎಂದು ಹೇಳಿದರು.

ಮೇಕೆದಾಟು ವಿಚಾರದಲ್ಲಿ ಕೋರ್ಟ್‌ನಲ್ಲೂ ನಮಗೆ ನ್ಯಾಯ ಸಿಗುತ್ತದೆ. ಅದು ಡಿಎಂಕೆ ಪ್ರಣಾಳಿಕೆ. ಇಂಡಿಯಾ ಮೈತ್ರಿಕೂಟದ ಪ್ರಣಾಳಿಕೆಯಲ್ಲ. ಅದು ಅವರ ಪಕ್ಷದ ಪ್ರಣಾಳಿಕೆ. ಅದು ಅವರ ರಾಜಕೀಯ ಬಯಕೆ ಅಷ್ಟೇ ಎಂದು ತಿಳಿಸಿದರು.

ಮೇಕೆದಾಟು ಯೋಜನೆ ಕರ್ನಾಟಕಕ್ಕೆ ಮಾತ್ರವಲ್ಲ. ಎರಡೂ ರಾಜ್ಯಗಳಿಗೆ ಉಪಯೋಗವಾಗುತ್ತದೆ. ಇಡೀ ದೇಶದ ಜನರು ಕರ್ನಾಟಕದಲ್ಲಿ ಇದ್ದಾರೆ. ಈ ಯೋಜನೆಯಿಂದ ಇಡೀ ದೇಶದ ಜನರಿಗೆ ಉಪಯೋಗವಾಗುತ್ತದೆ. ನಮ್ಮ ಸಹೋದರರು ಬೆಂಗಳೂರಿನಲ್ಲೂ ಇದ್ದಾರೆ. ಅವರಿಗೂ ಒಳ್ಳೆಯದು ಆಗಲಿ ಎಂದು ಮೇಕೆದಾಟು ಯೋಜನೆಯ ಪರವಾಗಿ ತಮಿಳುನಾಡು ಮಾತನಾಡುವ ಒಳ್ಳೆಯ ಕಾಲ ಬರಲಿದೆ ಎಂದರು.

## ಮರಿತಿಬ್ಬೇಗೌಡ ಸೇರಿ ಜೆಡಿಎಸ್ ಇಬ್ಬರು ಮಾಜಿ ಶಾಸಕರು ಕಾಂಗ್ರೆಸ್ ಸೇರ್ಪಡೆ

ಬೆಂಗಳೂರು: ವಿಧಾನಪರಿಷತ್ ಸ್ಥಾನಕ್ಕೆ ನಿನ್ನೆಯಷ್ಟೇ ರಾಜೀನಾಮೆ ನೀಡಿದ ಮ-ರಿತಿಬ್ಬೇಗೌಡ ಸೇರಿದಂತೆ ಜೆಡಿಎಸ್ ನ ಇಬ್ಬರು ಮಾಜಿ ಶಾಸಕರು ಇಂದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ. ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್ ಸದಸ್ಯರಾಗಿದ್ದ ನಾಗಮಂಗಲದ ಅಪ್ಪಾ-ಜಿಗೌಡ, ಮಾಜಿ ಶಾಸಕ ಎಂ.ಶ್ರೀನಿವಾಸ್, ಬಿಜೆಪಿಯ ಬಿಬಿಎಂಪಿ ಮಾಜಿ ಸದಸ್ಯ ಆಶಾ ಸುರೇಶ್ ಅವರು ಶುಕ್ರವಾರ ಕೆಪಿಸಿಸಿ ಕಚೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆಯಾದರು.

ಮಂಡ್ಯ ಜಿಲ್ಲಾ ಉಸ್ತುವಾರಿ ಹಾಗೂ ಕೃಷಿ ಸಚಿವ ಚಲುವರಾಯಸ್ವಾಮಿ, ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಸೇ-ರಿದಂತೆ ಜಿಲ್ಲೆಯ ಎಲ್ಲಾ ಶಾಸಕರು ಈ



ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಎಂ.ಶ್ರೀನಿವಾಸ್ ವಿಧಾನಸಭೆಯಲ್ಲಿ ತಮ್ಮೊಂದಿಗೆ ಕೆಲಸ ಮಾಡಿದ್ದರು. ಅನಾರೋಗ್ಯದಿಂದ ಆಸ್ಪತ್ರೆಯಲ್ಲಿದ್ದಾರೆ. ಹೀಗಾಗಿ ಕಾರ್ಯಕ್ರಮಕ್ಕೆ ಬಂದಿಲ್ಲ. ಪಕ್ಷಕ್ಕೆ ಸೇರ್ಪಡೆಯಾಗುತ್ತೇನೆ ಎಂದು ಪತ್ರ ಕಳುಹಿಸಿದ್ದಾರೆ. ಅವರ ಅನುಪಸ್ಥಿತಿಯಲ್ಲಿ ಅವರನ್ನೂ ಸೇರಿಸಿಕೊಳ್ಳಲಾಗಿದೆ. ಅವರ ಬೆಂಬಲಿಗರು, ಅಳಿಯ ಹಾಗೂ ಇತರರು ಶುಕ್ರವಾರ ಕಾಂಗ್ರೆಸ್ ಸೇರಿದ್ದಾರೆ ಎಂದು ಹೇಳಿದರು.

ಬಿಬಿಎಂಪಿ ಆಶಾ ಸುರೇಶ್ ತಮ್ಮ ಸಂಬಂಧಿಯಾಗಿದ್ದು, ಅವರನ್ನು ಶಾಸಕರನ್ನಾಗಿ ಮಾಡಲು ನಾವು ಪ್ರಯತ್ನ ಪಟ್ಟೆವು. ಆದರೆ ಹಳಿ ತಪ್ಪಿತ್ತು. ಈಗ ಅವರು ಪಕ್ಷಕ್ಕೆ ಮರಳಿದ್ದಾರೆ ಎಂದರು. ರಾಜರಾಜೇಶ್ವರಿ ನಗರ ಕ್ಷೇತ್ರದ ಶಾಸಕ ಮುನಿರತ್ನ ಅವರು ತಮ್ಮ ಪಕ್ಷದ ಒಬ್ಬೊಬ್ಬರೇ ಮುಖಂಡರನ್ನು ನಮ್ಮ ಪಕ್ಷಕ್ಕೆ ಕಳುಹಿಸುತ್ತಿದ್ದಾರೆ. ಇಂದು ಆಶಾ ಸುರೇಶ್, ಸುರೇಶ್, ರಮೇಶ್ ಸೇರಿದಂತೆ ಹಲವು ನಾಯಕರು ಕಾಂಗ್ರೆಸ್ ಸೇರಿದ್ದಾರೆ. ಡಿ.ಕೆ.ಸುರೇಶ್‌ರನ್ನು ಗೆಲ್ಲಿಸಲು ಎಲ್ಲರೂ ಒಟ್ಟಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಮರಿತಿಬ್ಬೇಗೌಡ ಅವರು ಜೆಡಿ-ಎಸ್ಗೆ ಆಧಾರ ಸ್ತಂಭದಂತಿದ್ದರು. ಪಕ್ಷದ ಮೂಲಸ್ತಂಭವಾಗಿದ್ದ ಅವರು ಕಾಂಗ್ರೆಸ್ಗೆ ಸೇರಿದ್ದರಿಂದ ನಮ್ಮ ಬಲ ಹೆಚ್ಚಾಗಿದೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಇದೇ ವೇಳೆ ಮಾತನಾಡಿದ ಮ-ರಿತಿಬ್ಬೇಗೌಡ, ನಾನು 2000 ರಲ್ಲಿ ಮೊದಲ ಬಾರಿಗೆ ಕಾಂಗ್ರೆಸ್ನಿಂದ ಬೆಂಗಳೂರು ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ವಿಧಾನಪರಿಷತ್ ಸದಸ್ಯನಾಗಿದ್ದೆ. 2006 ರಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಆಯ್ಕೆಯಾಗಿದ್ದೆ. 3 ಮತ್ತು 4 ನೇ ಬಾರಿ ಜೆಡಿಎಸ್ ಪಕ್ಷ ನನಗೆ ಟಿಕೆಟ್ ಕೊಟ್ಟು ಬೆಂಬಲ ನೀಡಿತ್ತು ಎಂದರು.

## ಬೆಳಗಾವಿ: ದಾಖಲೆ ಇಲ್ಲದ 14 ಲಕ್ಷ ರೂ. ಸಾಗಾಟ; ವ್ಯಕ್ತಿ ಪೊಲೀಸ್ ವಶಕ್ಕೆ



ಬೆಳಗಾವಿ: ಲೋಕಸಭಾ ಚುನಾವಣೆ ಯ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಪೊಲೀಸರು ಹದ್ದಿನ ಕಣ್ಣಿಟ್ಟಿದ್ದಾರೆ. ಚುನಾವಣಾ ನೀತಿ ಸಂಹಿತೆ ಜಾ-ರಿಯಾದ ಬೆನ್ನಲ್ಲೇ ಬೆಳಗಾವಿ ಜಿಲ್ಲೆಯಲ್ಲಿ ಪೊಲೀಸರು ಭರ್ಜರಿ ಬೇಟೆಯಾಡಿದ್ದಾರೆ.

ನಿಪ್ಪಾಣಿ ಗಡಿಯ ಕೊಗನೊಳ್ಳಿ ಟೋಲ್ ಬಳಿ ದಾಖಲೆ ಇಲ್ಲದೇ 14 ಲಕ್ಷ ಸಾಗಿಸುತ್ತಿದ್ದ ಹಣವನ್ನು ಪೋಲಿಸ್ ವಶಕ್ಕೆ ಪಡೆದುಕೊಂಡಿದ್ದಾರೆ. ಚುನಾವಣಾ ನೀತಿ ಸಂಹಿತೆ ಜಾರಿಯಾದ ಬೆನ್ನಲ್ಲೇ ಗಡಿ ಚೆಕ್ ಪೋಸ್ಟ್‌ಗಳಲ್ಲಿ ಪೊಲೀಸರು ತಪಾಸಣೆ ನಡೆಸುತ್ತಿದ್ದರು. ಈ ವೇಳೆ ಬಸ್ನಲ್ಲಿ ಪ್ರಯಾಣಿಸುತ್ತಿದ್ದ ನಿಸಾರ್ ಎಂಬಾತನ ಬಳಿ ಹಣ ಪತ್ತೆಯಾಗಿದೆ. ವಿಚಾರಣೆ ವೇಳೆ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 14 ಲಕ್ಷ ಹಣ ಎಂದು ಗೊತ್ತಾಗಿದೆ. ಹೀಗಾಗಿ ಆ ಹಣವನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಸದ್ಯ ಈ ಕೇಸ್ ಸಂಬಂಧ ಚುನಾವಣಾ ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡು ಪರಿಶೀಲನೆ ನಡೆಸುತ್ತಿದ್ದಾರೆ.

## ಸಿಎಂ ಅರವಿಂದ ಕೇಜ್ರಿವಾಲ್ ಬಂಧನ

ನವದೆಹಲಿ: ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಬಂಧಿಸಲಾಗಿದೆ.

9 ಬಾರಿ ಸಮನ್ಸ್ ನೀಡಿದರೂ ಕೇಜ್ರಿವಾಲ್ ನ್ಯಾಯಾಯಕ್ಕೆ ಹಾಜರಾಗಿರಲಿಲ್ಲ. ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ವಿಚಾರಣೆ ಎದುರಿಸುತ್ತಿದ್ದ ದೆಹಲಿ ಮುಖ್ಯಮಂತ್ರಿ ಹಾಗೂ ಆಮ್ ಆದ್ಮಿ ಪಕ್ಷದ ಸಂಸ್ಥಾಪಕ ಅರವಿಂದ ಕೇಜ್ರಿವಾಲ್ ಅವರನ್ನು ಗುರುವಾರ ರಾತ್ರಿ ಜಾರಿ ನಿರ್ದೇಶನಾಲಯ( ಇಡಿ) ಅಧಿಕಾರಿಗಳು ಬಂಧಿಸಿದ್ದಾರೆ. ಕೇಜ್ರಿವಾಲ್ ಬಂಧನ ವಿರೋಧಿಸಿ ಆಮ್ ಆದ್ಮಿ ಪಕ್ಷದ ಕಾರ್ಯಕರ್ತರು ದೆಹಲಿ, ಪಂಜಾಬ್ ಸಹಿತ ಹಲವು ಕಡೆ ಪ್ರತಿಭಟನೆ ನಡೆಸಿದ್ದಾರೆ. ಮುನ್ನೆಚ್ಚರಿಕೆ ಕ್ರಮವಾಗಿ ದೆಹಲಿಯಲ್ಲಿ ನಿಷೇಧಾಜ್ಞೆಯನ್ನು ಜಾ-ರಿಗೊಳಿಸಲಾಗಿದೆ.

ಕೇಜ್ರಿವಾಲ್ ಅವರ ಬಂಧನವನ್ನು ರದ್ದುಗೊಳಿಸುವಂತೆ ಪಕ್ಷವು ಈಗಾಗಲೇ ಸುಪ್ರೀಂ ಕೋರ್ಟ್ ಮೆಟ್ಟಿಲು ಏರಿದೆ ಎಂದು ದೆಹಲಿ ಸಚಿವೆ ಮತ್ತು ಎಎಪಿ ನಾಯಕಿ ಅತಿಶಿ ಹೇಳಿದ್ದಾರೆ. "ನಾವು ಇಂದು ರಾತ್ರಿಯೇ ಸುಪ್ರೀಂ ಕೋರ್ಟ್‌ನಿಂದ ತುರ್ತು ವಿಚಾರಣೆಯನ್ನು ಕೇಳಿದ್ದೇವೆ" ಎಂದು ಅತಿಶಿ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಅಬಕಾರಿ ಹಗರಣ ಪ್ರಕರಣದಲ್ಲಿ ದೆಹಲಿ ಸಚಿವ ಸತ್ಯೇಂದ್ರ ಜೈನ್ ಸೇರಿದಂತೆ ಸುಮಾರು 12 ಜನರನ್ನು ಈಗಾಗಲೇ ಬಂಧಿಸಿದೆ. ಕಳೆದ ವರ್ಷದ ಫೆಬ್ರವ-ರಿಯಲ್ಲಿ ಡಿಸಿಎಂ ಮನೀಶ್ ಸಿಸೋಡಿಯಾ ಅವರ ಬಂಧನವಾಗಿತ್ತು. ವಿಚಾರಣೆಗೆ ಹಾಜರಾಗುವಂತೆ ಕೇಜ್ರಿವಾಲ್ ಅವ-ರಿಗೆ ಇಡಿ ಸಮನ್ಸ್ ನೀಡಿತ್ತು, ಆದ-'ರೆ ಕೇಜ್ರಿವಾಲ್ ಇಲ್ಲಿಯವರೆಗೆ ಎಲ್ಲಾ ಸಮನ್ಸ್‌ಗಳನ್ನು ತಪ್ಪಿಸಿಕೊಂಡಿದ್ದರು. ಜಾರಿ ನಿರ್ದೇಶನಾಲಯದ ಸಮನ್ಸ್ ಅಸಾಂವಿಧಾನಿಕ ಎಂದು ಪ್ರಶ್ನಿಸಿ ಕೇಜ್ರಿವಾಲ್ ಕೋರ್ಟ್ ಮೆಟ್ಟಿಲೇರಿದ್ದರು. ಈ



ಹಂತದಲ್ಲಿ ಪ್ರಕರಣದಲ್ಲಿ ಮಧ್ಯಪ್ರವೇಶಿಸುವ ಉದ್ದೇಶವಿಲ್ಲ ಎಂದು ನ್ಯಾಯಾಲಯ ಗುರುವಾರ ಹೇಳಿದ ನಂತರ ಕೇಜ್ರಿವಾಲ್ ಅವರಿಗೆ ಬಂಧನದ ಭೀತಿ ಎದುರಾಗಿತ್ತು. ಜಾರಿ ನಿರ್ದೇಶನಾಲಯದ ಬಲವಂತದ ಕ್ರಮದಿಂದ ಕೇಜ್ರಿವಾಲ್ ಅವರಿಗೆ ಯಾವುದೇ ರಕ್ಷಣೆ ನೀಡಲು ನ್ಯಾಯಾಲಯ ನಿರಾಕ-ರಿಸಿದ್ದರಿಂದ ಹೈಕೋರ್ಟ್ ತೀರ್ಪಿನ ಕೆಲವೇ ಗಂಟೆಗಳ ನಂತರ, ಇಡಿ ಅಧಿಕಾರಿಗಳು ಕೇಜ್ರಿವಾಲ್ ಅವರ ಸಿವಿಲ್ ಲೈನ್ ನಿವಾಸಕ್ಕೆ ಶೋಧ ವಾರಂಟ್ ನೊಂದಿಗೆ ತೆರಳಿದರು. ಕೆಲವು ಗಂಟೆಗಳ ನಂತರ, ಕೇಜ್ರಿವಾಲ್ ಅವರನ್ನು ವಶಕ್ಕೆ ತೆಗೆದುಕೊಳ್ಳಲಾಯಿತು. ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿಯೇ ದೆಹಲಿ ಡಿಸಿಎಂ ಮನೀಶ್ ಸಿಸೋಡಿಯಾ ಮತ್ತು ಸಚಿವರಾಗಿದ್ದ ಸಂಜಯ್ ಸಿಂಗ್ ಅವರನ್ನು ಈ ಹಿಂದೆ ಬಂಧಿಸಲಾಗಿತ್ತು. ಬಿಆರ್ ಎಸ್ ನಾಯಕಿ ಕೆ.ಕವಿತಾ ಅವರನ್ನು ಕಳೆದ ವಾರ ಹೈದರಾಬಾದ್‌ನಲ್ಲಿ ಬಂಧಿಸಿ ನವದೆಹಲಿಗೆ ಕರೆತರಲಾಗಿತ್ತು.ಕವಿತಾ ಅವರ ಬಂಧನವು ಕೇಜ್ರಿವಾಲ್ ಅವರು ಇಡಿಯ ಮುಂದಿನ ಗುರಿಯಾಗಲಿದ್ದಾರೆ ಎಂಬ ಸುಳಿವು ನೀಡಿತ್ತು. ದೆಹಲಿಯಲ್ಲಿ ಎರಡು ವರ್ಷದ ಹಿಂದೆ ಆಮ್ ಆದ್ಮಿ ಪಕ್ಷ ಹೊಸ ಅಬಕಾರಿ ನೀತಿ ಜಾರಿಗೊಳಿಸಿತ್ತು. ಮದ್ಯ ಮಾರಾಟದಿಂದ ಹೆಚ್ಚಿನ ಆದ-ಾಯ ಪಡೆಯುವ ನಿಟ್ಟಿನಲ್ಲಿ ಕೇಜ್ರಿವಾಲ್ ಸರ್ಕಾರವು ಹಳೆಯ ಅಬಕಾರಿ ನೀತಿ ಬದಲಿಸಿ ಹೊಸ ನೀತಿ ಜಾರಿಗೊಳಿಸಿದ್ದರು. ಆದರೆ ಈ ನೀತಿ ಜಾರಿಗೊಳಿಸುವ ಮೂಲಕ ಭಾರೀ ಭ್ರಷ್ಟಾಚಾರ ನಡೆದಿದೆ ಎನ್ನುವ ಗಂಭೀರ ಆರೋಪಗಳು ಬಂದಿದ್ದವು. . ಮಧ್ಯವರ್ತಿಗಳು, ಮಾರಾಟಗಾರರು ಮತ್ತು ಅಧಿಕಾರಿಗಳಿಗೆ ಲಾಭವಾಗುವಂತೆ ದೆಹಲಿ ಅಬಕಾರಿ ನೀತಿಯನ್ನು ರೂಪಿಸುವಲ್ಲಿ ಲಾಬಿ ನಡೆದಿದೆ. ಇದಕ್ಕೆ ರಾಜಕೀಯ ನಾಯಕರ ಪ್ರೋತ್ಸಾಹವಿದ್ದು, ಆ ವಿಷಯದತ್ತ ಗಮನ ಹರಿಸಲಾಗಿದೆ ಎಂದು ಸಿಬಿಐ ಹೇಳಿತ್ತು.

ದೆಹಲಿ ಸರ್ಕಾರ ಮದ್ಯ ನೀತಿಯನ್ನು ಹಿಂಪಡೆದಿದೆ. ಆದರೂ ಅದರ ವಿನ್ಯಾಸ ಮತ್ತು ಅನುಷ್ಠಾನದಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಸಿಬಿಐ ಮತ್ತು ಇಡಿ ತನಿಖೆ ನಡೆಸುತ್ತಿವೆ. ಮದ್ಯದ ಲಾಬಿಯಿಂದ ಸುಮಾರು 30 ಕೋಟಿ ರೂಪಾಯಿ ಕೈ ಬದಲಾಗಿದೆ ಎಂದು ಸಿಬಿಐ ಹೇಳುತ್ತಿದೆ.

## ಅಕ್ರಮವಾಗಿ 38 ಲಕ್ಷ ರೂ. ಸಾಗಾಟ: ಅಧಿಕಾರಿಗಳ ಕೈಗೆ ಸಿಕ್ಕಿಬಿದ್ದ ಕಾರು ಚಾಲಕ



ಚಿತ್ರದುರ್ಗ: 2024 ಲೋಕಸಭೆಗೆ ಚುನಾವಣಾ ದಿನಾಂಕ ಘೋಷಣೆ ಆಗುತ್ತಿದ್ದಂತೆ ದೇಶದಲ್ಲಿ ನೀತಿ ಸಂಹಿತೆ ಜಾರಿಯಾಗಿದೆ. ಈ ಬೆನ್ನಲ್ಲೇ ದಾಖಲೆ ಇಲ್ಲದೇ ಸಾಗಿಸುತ್ತಿದ್ದ ಬರೋಬ್ಬರಿ 38 ಲಕ್ಷ ಹಣವನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

ಚಳ್ಳಕೆರೆ ತಾಲೂಕಿನ ನಾಯಕನಹಟ್ಟಿ ಚೆಕ್ ಪೋಸ್ಟ್ ಬಳಿ ಅಧಿಕಾರಿಗಳು ಕಾರು ತಪಾಸಣೆ ಮಾಡುತ್ತಿದ್ದರು. ಈ ವೇಳೆ ದಾಖಲೆ ಇಲ್ಲದ 38 ಲಕ್ಷ ರೂಪಾಯಿ ಹಣ ಪತ್ತೆಯಾಗಿದೆ. ಕೂಡಲೇ ಹಣವನ್ನು ವಶಕ್ಕೆ ಪಡೆದುಕೊಂಡ ಎಫ್‌ಎಸ್ಟಿ ಟೀಮ್ ಪರಿಶೀಲನೆ ನಡೆಸುತ್ತಿದೆ. ಈ ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ಎಸ್ಪಿ ಧರ್ಮೇಂದ್ರಕುಮಾರ್ ಮೀನಾ ಹಾಗೂ ಆಜಖಕ ರಾಜಣ್ಣ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕೇಸ್ ಸಂಬಂಧ ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## 'ಕೇಜ್ರಿವಾಲ್ ಬಗ್ಗೆ ಸಂಪೂರ್ಣ ನಿರಾಶೆಯಾಗಿದೆ': ಅಬಕಾರಿ ನೀತಿ ಹಗರಣ ಕುರಿತು ನಿವೃತ್ತ ನ್ಯಾ. ಎನ್ ಸಂತೋಷ್ ಹೆಗ್ಡೆ

ಬೆಂಗಳೂರು: ಅಬಕಾರಿ ನೀತಿ ಸಂಬಂಧಿತ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತರಾಗಿರುವ ಆಮ್ ಆದ್ಮಿ ಪಕ್ಷದ ನಾಯಕ ಮತ್ತು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಕುರಿತು ನನಗೆ ಸಂಪೂರ್ಣ ನಿರಾಶೆಯಾಗಿದೆ ಎಂದು ಸುಪ್ರೀಂ ಕೋರ್ಟ್ ಮಾಜಿ ನ್ಯಾಯಾಧೀಶ ಹಾಗೂ ನಿವೃತ್ತ ಲೋಕಾಯುಕ್ತ ಎನ್ ಸಂತೋಷ್ ಹೆಗ್ಡೆ ಶುಕ್ರವಾರ ಹೇಳಿದ್ದಾರೆ.

ಭಾರತದ ಮಾಜಿ ಸಾಲಿಸಿಟರ್ ಜನರಲ್ ಆಗಿದ್ದ ಸಂತೋಷ್ ಹೆಗ್ಡೆ ಇದೇ ಅರವಿಂದ್ ಕೇಜ್ರಿವಾಲ್ ಅವರ ಜೊತೆ ಈ ಹಿಂದೆ ಭ್ರಷ್ಟಾಚಾರ ವಿರೋಧಿ ಚಳುವಳಿಯಲ್ಲೂ ಪಾಲ್ಗೊಂಡಿದ್ದರು. ಈ ಹಿಂದೆ ಅಣ್ಣಾ ಹಜಾರೆಯವರ ನೇತೃತ್ವದಲ್ಲಿ ನಡೆದ 'ಭ್ರಷ್ಟಾಚಾರದ ವಿರುದ್ಧ ಭಾರತ' ಆಂದೋಲನದಲ್ಲಿ ಪಾಲ್ಗೊಂಡಿದ್ದ ಕೇಜ್ರಿವಾಲ್ ಸೇರಿದಂತೆ ಪ್ರಮುಖ ವ್ಯಕ್ತಿಗಳಲ್ಲಿ ಸಂತೋಷ್ ಹೆಗ್ಡೆ ಕೂಡ ಒಬ್ಬರಾಗಿದ್ದಾರೆ.

"ಅಧಿಕಾರದಲ್ಲಿ ದುರಾಶೆ ನಿಮ್ಮನ್ನು ಮೀರಿಸುತ್ತದೆ ಎಂಬುದನ್ನು ಇದು ಸ್ಪಷ್ಟವಾಗಿ ತೋರಿಸುತ್ತದೆ. ಕೇಜ್ರಿವಾಲ್ ವಿಚಾರದಲ್ಲಿ ನನಗೆ ಸಂಪೂರ್ಣ ನಿರಾಶೆಯಾಗಿದೆ. ಎಎಪಿ (ಅಧಿಕಾರಕ್ಕೆ ಬಂದ ನಂತರ) ಆಡಳಿತಾತ್ಮಕ ನ್ಯಾಯಸಮ್ಮತತೆಯನ್ನು



ಎತ್ತಿಹಿಡಿಯುತ್ತದೆ ಎಂದು ನಾನು ಭಾವಿಸಿದ್ದೆ. ಇದು ಅಧಿಕಾರವನ್ನು ಭ್ರಷ್ಟಗೊಳಿಸುತ್ತದೆ ಮತ್ತು ಸಂಪೂರ್ಣ ಅಧಿಕಾರವು ಸಂಪೂರ್ಣವಾಗಿ ಭ್ರಷ್ಟಗೊಳ್ಳುತ್ತದೆ ಎಂಬ ಅಂಶದ ಸೂಚನೆಯಾಗಿದೆ ಎಂದು ಹೇಳಿದರು.

"ಇಂದು ರಾಜಕೀಯವು ಭ್ರಷ್ಟಾಚಾರದ ಗುಹೆಯಾಗಿದೆ. ಯಾವುದೇ ರಾಜಕೀಯ ಪಕ್ಷವು ಅದರಿಂದ ಮುಕ್ತವಾಗಿಲ್ಲ. ಭ್ರಷ್ಟಾಚಾರದ ವಿರುದ್ಧ ಭಾರತ ಆಂದೋಲನವು ಆಡಳಿತದಲ್ಲಿನ ಭ್ರಷ್ಟಾಚಾರದ ವಿರುದ್ಧ ಹೋರಾಡುತ್ತಿದೆ. ನಾವು ರಾಜಕೀಯದಿಂದ ದೂರವಿದ್ದೇವೆ ಮತ್ತು ಅದರಿಂದ ದೂರವಿರಬೇಕು ಎಂಬುದು ನಮ್ಮ ತತ್ವವಾಗಿತ್ತು. ಶುದ್ಧ ರಾಜಕೀಯ, ಆದರೆ ನಂತರ ಒಂದು ಗುಂಪಿನ ಜನರು ನಾವು ರಾಜಕೀಯಕ್ಕೆ ಪ್ರವೇಶಿಸಲು ನಿರ್ಧರಿಸಿದರು. (ನಂತರ ೦೦ಕ ಪಕ್ಷವನ್ನು ಸ್ಥಾಪಿಸಲು ಹೋದರು) ಮತ್ತು ಅವರ ಭ್ರಷ್ಟಾಚಾರವನ್ನು ಸ್ವಚ್ಛಗೊಳಿಸುತ್ತೇವೆ ಎಂಬ ಅವರ ಹೇಳಿಕೆಯನ್ನು ನಾನು ಎಂದಿಗೂ ನಂಬಲಿಲ್ಲ. ೦೦ಕ ನಲ್ಲಿ ಇಂದು ಏನು ನಡೆಯುತ್ತಿದೆ ಎಂಬುದಕ್ಕೆ ಇದು ಉದಾಹರಣೆಯಾಗಿದೆ. ಅಂತೆಯೇ ಪಕ್ಷಕ್ಕೆ ಸೇರುವಂತೆ ಆಹ್ವಾನಿಸಲು ಕೇಜ್ರಿವಾಲ್ ಮನೆಗೆ ಬಂದಿದ್ದರು ಆದರೆ ನಾನು ಒಪ್ಪಲಿಲ್ಲ ಎಂದರು.

ಭ್ರಷ್ಟಾಚಾರ ಪ್ರಕರಣಗಳಲ್ಲಿ ಕೇಂದ್ರೀಯ ಸಂಸ್ಥೆಗಳಾದ ಇಡಿ ಮತ್ತು ಸಿಬಿಐ ಅನ್ನು ದುರುಪಯೋಗಪಡಿಸಿಕೊಂಡಿದೆ ಮತ್ತು ಅವುಗಳನ್ನು ಗುರಿಯಾಗಿಸಿಕೊಂಡಿದೆ ಎಂದು ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ವಿರುದ್ಧ ವಿರೋಧ ಪಕ್ಷಗಳು ಪದೇ ಪದೇ ಪದೇ ಪದೇ ಮಾಡುತ್ತಿರುವ ಆರೋಪಗಳ ಬಗ್ಗೆ ಹೆಗ್ಡೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಆಡಳಿತ ಪಕ್ಷವು ವಿರೋಧವನ್ನು ನಾಶಮಾಡಲು ಮಾತ್ರ ಇದನ್ನು ಮಾಡುತ್ತಿದೆ ಎಂದು ವಿರೋಧ ಪಕ್ಷಗಳ ಆರೋಪ, ನಾನು ಅದನ್ನು ನಂಬುವುದಿಲ್ಲ. ಹೌದು, ಅವರು ಇದನ್ನು ಆಯ್ದುಕೊಂಡು ಮಾಡುತ್ತಿದ್ದಾರೆ. ಆದರೆ ಅದು ಅಪರಾಧವಲ್ಲ. ಏಕೆಂದರೆ ಕ್ರಿಮಿನಲ್ ನ್ಯಾಯಶಾಸ್ತ್ರದಲ್ಲಿ ಯಾವುದೇ ವಿಧಿ ಇಲ್ಲ. ಸಂವಿಧಾನದ ವಿಧಿ 14 ಸಮಾನತೆಯನ್ನು ಅನ್ವಯಿಸುವುದಿಲ್ಲ ಮತ್ತು ಒಂದು ದಿನ ಅವರು ಅಧಿಕಾರಕ್ಕೆ ಬಂದರೆ, ಅವರು ಬಿಜೆಪಿ ವಿರುದ್ಧವೂ ಇದೇ ರೀತಿ ಹೋಗುತ್ತಾರೆ. ಇತಿಹಾಸದಲ್ಲಿ ಇಂತಹ ಸಾಕಷ್ಟು ಉದಾಹರಣೆ ಇದೆ ಎಂದು ಅವರು ಹೇಳಿದರು.

ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಪ್ರತಿಯೊಬ್ಬ ಅರ್ಹರು ಮತದಾನ ಮಾಡಬೇಕೆಂದು ಹೆಗ್ಡೆ ಕರೆ ನೀಡಿದರು. "ಯಾವುದೇ ಜಾತಿ, ಅಥವಾ ಯಾವುದೇ ಸಂಬಂಧವನ್ನು ಆಧರಿಸಿ ಅಲ್ಲ, ಅಭ್ಯರ್ಥಿಯ ಗುಣಮಟ್ಟವನ್ನು ಆಧರಿಸಿ ಮತ ಚಲಾಯಿಸಿ. ನಿಮ್ಮ ಕ್ಷೇತ್ರಕ್ಕೆ ಸೇವೆ ಸಲ್ಲಿಸುವ ಸೂಕ್ತ ಅಭ್ಯರ್ಥಿ ನಿಮಗೆ ಸಿಗದಿದ್ದರೆ, ನೋಟಾ (ಮೇಲಿನ ಯಾವುದೂ ಅಲ್ಲ) ಇದೆ. ನೋಟಾ ಸೂಕ್ತ ರಾಜಕಾರಣಿ ಅಲ್ಲ ಎಂಬ ಸಂದೇಶವನ್ನು ರಾಜಕೀಯ ಪಕ್ಷಗಳಿಗೆ ರವಾನಿಸುತ್ತದೆ," ಎಂದು ಅವರು ಹೇಳಿದರು.

## ಹೆಣ್ಣು ಭ್ರೂಣ ಹತ್ಯೆ ಪ್ರಕರಣದಲ್ಲಿ ಆರೋಗ್ಯ ಇಲಾಖೆ ಶಾಮೀಲು; ದಿನೇಶ್ ಗುಂಡೂರಾವ್ ವಿರುದ್ಧ ಆರ್ ಅಶೋಕ ವಾಗ್ದಾಳಿ

ಬೆಂಗಳೂರು: ಹೆಣ್ಣು ಭ್ರೂಣ ಹತ್ಯೆ ಪ್ರಕರಣವನ್ನು ಮುಚ್ಚಿ ಹಾಕಲು ರಾಜ್ಯ ಸರ್ಕಾರ ಯತ್ನಿಸುತ್ತಿದೆ ಎಂದು ಆರೋಪಿಸಿ ಬಿಜೆಪಿಯ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ ಶುಕ್ರವಾರ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಅವರು, ಬೇಲಿಯೇ ಎದ್ದು ಹೊಲ ಮೇಯ್ದಂತೆ ಎಂಬಂತೆ ಸಾರ್ವಜನಿಕರ ಜೀವ ರಕ್ಷಣೆ ಮಾಡಬೇಕಾದ ಆರೋಗ್ಯ ಇಲಾಖೆಯೇ ಭ್ರೂಣ ಪತ್ತೆ-ಹತ್ಯೆ ಜಾಲದಲ್ಲಿ ಶಾಮೀಲಾಗಿರುವುದು ಅತ್ಯಂತ ನಾಚಿಕೇಗೇಡಿನ ಸಂಗತಿ ಎಂದಿದ್ದಾರೆ.

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರೇ, ತನಿಖಾಧಿಕಾರಿಗಳು ಭ್ರೂಣ ಹತ್ಯೆ



ಪ್ರಕರಣದ ವರದಿ ಸಲ್ಲಿಸಬಾರದು ಎಂದು ಇಷ್ಟೊಂದು ಒತ್ತಡ ಹೇರುತ್ತಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗೆ ಯಾರ ಕುಮ್ಮಕ್ಕಿದೆ, ಯಾವ ಬೆಂಬಲದಿಂದ ಅಧಿಕಾರಿಗಳ ಈ ಕಳ್ಳಾಟ ನಡೆಯುತ್ತಿದೆ? ಎಂದು ಪ್ರಶ್ನಿಸಿದ್ದಾರೆ.

ಇದನ್ನೆಲ್ಲಾ ನೋಡುತ್ತಿದ್ದರೆ ರಾಜ್ಯದಲ್ಲಿ ತಾಂಡವವಾಡುತ್ತಿರುವ ಅಮಾನುಷ ಭ್ರೂಣ ಪತ್ತೆ-ಹತ್ಯೆ ಜಾಲವನ್ನು ಬೇಧಿಸಲು ಹಿಂದೇಟು ಹಾಕುತ್ತಿರುವ ಕಾಂಗ್ರೆಸ್ ಸರ್ಕಾರ ಕಾಣದ 'ಕೈ'ಗಳ ಒತ್ತಡಕ್ಕೆ ಮಣಿದು ಪ್ರಕರಣವನ್ನು ಮುಚ್ಚಿ ಹಾಕಲು ಪ್ರಯತ್ನಿಸುತ್ತಿದೆ ಎನ್ನುವ ಅನುಮಾನ ಮೂಡುತ್ತಿದೆ ಎಂದು ಅಶೋಕ ಹೇಳಿದ್ದಾರೆ.

ಈ ಪ್ರಕರಣದ ಆಳ-ಅಗಲ, ಗಂಭೀರತೆ ಮತ್ತು ಇದರ ಹಿಂದಿರುವ ಪ್ರಭಾವಿ ಶಕ್ತಿಗಳನ್ನು ಅಂದಾಜಿಸಿಯೇ ನಾನು ಈ ಪ್ರಕರಣದ ತನಿಖೆಗೆ ಎಸ್‌ಐಟಿ ರಚಿಸಬೇಕು, ತ್ವರಿತ ವಿಚಾರಣೆಗಾಗಿ ವಿಶೇಷ ನ್ಯಾಯಾಲಯ ಸ್ಥಾಪಿಸಬೇಕು ಎಂದು ಬೆಳಗಾವಿ ಅಧಿವೇಶನದ ಸಂದರ್ಭದಲ್ಲಿ ಒತ್ತಾಯಿಸಿದ್ದೆ ಎಂದು ಅವರು ಹೇಳಿದರು.

**ಡಿಎಚ್‌ಒ ವಿರುದ್ಧ ದೂರು**

ಬೆಂಗಳೂರು ಸಮೀಪದ ಹೊಸಕೋಟೆ ಮತ್ತು ನೆಲಮಂಗಲ ಪಟ್ಟಣಗಳಲ್ಲಿ ಇತ್ತೀಚೆಗೆ ನಡೆದ ಹೆಣ್ಣು ಭ್ರೂಣ ಹತ್ಯೆ ಪ್ರಕರಕ್ಕೆ ಸಂಬಂಧಿಸಿದ ವರದಿಯನ್ನು ನೀಡದಂತೆ ತಮ್ಮ ಮೇಲೆ ಒತ್ತ ಹೇರಲಾಗುತ್ತಿದೆ ಎಂದು ಆರೋಪಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್‌ಆರ್ ಮಂಜುನಾಥ್ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಿಗೆ ಬುಧವಾರ ದೂರು ಸಲ್ಲಿಸಿದ್ದಾರೆ.

## ಮತ್ತೆ ಮನೆ ಸೇರಿದ ಅನಂತಕುಮಾರ್ ಹೆಗಡೆ

ಕಾರವಾರ: ಬರೋಬ್ಬರಿ ನಾಲ್ಕೂವರೆ ವರ್ಷಗಳ ಕಾಲ ಯಾರ ಸಂಪರ್ಕಕ್ಕೂ ಬಾರದೆ ಸೈಲೆಂಟ್ ಆಗಿದ್ದ ಉತ್ತರ ಕನ್ನಡ ಬಿಜೆಪಿ ಸಂಸದ ಅನಂತಕುಮಾರ್ ಹೆಗಡೆ, ಲೋಕಸಭೆ ಚುನಾವಣೆಗೆ ಕೆಲವೇ ತಿಂಗಳು ಬಾಕಿ ಇರುವಂತೆ ಮತ್ತೆ ಆಕ್ಟಿವ್ ಆಗಿದ್ದರು. ವಿವಾದಾತ್ಮಕ ಹೇಳಿಕೆ ಮೂಲಕ ಸುದ್ದಿ ಆರಂಭಿಸಿದ್ದ ಅನಂತಕುಮಾರ್ ಹೆಗಡೆ ಇದೀಗ ಮತ್ತೆ ಯಾರ ಸಂಪರ್ಕಕ್ಕೂ ಸಿಗದೆ ಮನೆ ಸೇರಿದ್ದಾರೆ.




ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ ಸಾರ್ವಜನಿಕವಾಗಿ ಕಾಣಿಸಿಕೊಂಡಿದ್ದ ಅನಂತಕುಮಾರ್ ಹೆಗಡೆ, ವಿವಾದಾತ್ಮಕ ಹೇಳಿಕೆಗಳ ಮೂಲಕ ಕಾರ್ಯಕರ್ತರನ್ನು ಸೆಳೆಯುವ ಪ್ರಯತ್ನಕ್ಕೆ ಕೈ ಹಾಕಿದ್ದರು. ಅಭ್ಯರ್ಥಿಗಳ ಮೊದಲ ಪಟ್ಟಿಯಲ್ಲಿ ಕರ್ನಾಟಕದಿಂದ ಯಾರ ಹೆಸರು ಕೂಡ ಘೋಷಣೆ ಆಗಿರಲಿಲ್ಲ. ಯಾವಾಗ ಬಿಜೆಪಿ 2ನೇ ಪಟ್ಟಿ ಬಿಡುಗಡೆಯಾಯ್ತೋ ಅಂದಿನಿಂದ ಅನಂತಕುಮಾರ್ ಹೆಗಡೆ ಸೈಲೆಂಟ್ ಆಗಿದ್ದಾರೆ.

ಈ ಬಾರಿ ಅನಂತಕುಮಾರ ಹೆಗಡೆ ಅವರಿಗೆ ಟಿಕೆಟ್ ಕೈತಪ್ಪಲಿದೆ ಎಂದು ಹೇಳಲಾಗುತ್ತಿದೆ. ಹೀಗಿದ್ದರೂ ನಾಲ್ಕೂವರೆ ವರ್ಷಗಳ ನಂತರ ಸಾರ್ವಜನಿಕ ರಂಗಕ್ಕೆ ಎಂಟ್ರಿಕೊಟ್ಟ ಹೆಗಡೆ ಟಿಕೆಟ್ ಸಿಗುವ ವಿಶ್ವಾಸದಲ್ಲಿದ್ದರು. ಇದೇ ವಿಶ್ವಾಸದಲ್ಲಿ ಕಾರ್ಯಕರ್ತರ ಸಭೆಗಳನ್ನು ನಿರಂತರವಾಗಿ ನಡೆಸುತ್ತಾ ಬಂದಿದ್ದರು. ಆದರೆ, ಎರಡನೇ ಪಟ್ಟಿಯಲ್ಲಿ ತನ್ನ ಹೆಸರು ಘೋಷಣೆ ಆಗದಿರುವುದನ್ನು ಕಂಡ ಹೆಗಡೆ, ಟಿಕೆಟ್ ಕೈ ತಪ್ಪುವ ಸಾಧ್ಯತೆ ಹಿನ್ನೆಲೆ ಮತ್ತೆ ಯಾರ ಕೈಗೂ ಸಿಗದೆ ಶಿರಸಿ ಪಟ್ಟಣದಲ್ಲಿರುವ ತನ್ನ ನಿವಾಸದಲ್ಲಿದಲ್ಲೇ ಕುಳಿತುಕೊಂಡಿದ್ದಾರೆ.

ಶಿರಸಿಯಲ್ಲಿದ್ದರೂ ಯಾವೊಬ್ಬ ಕಾರ್ಯಕರ್ತನನ್ನೂ ಹೆಗಡೆ ಭೇಟಿ ಆಗುತ್ತಿಲ್ಲ. ಮತ್ತೊಮ್ಮೆ ಮೋದಿ ಘೋಷಣೆಯಡಿ ಪ್ರಚಾರ ಆರಂಭಿಸಿದ್ದ ಹೆಗಡೆ, 2ನೇ ಪಟ್ಟಿ ಬಿಡುಗಡೆ ಬಳಿಕ ಒಂದೇ ಒಂದು ಸಭೆಯನ್ನೂ ಮಾಡಿಲ್ಲ. ಯಾರೇ ನಿಂತ್ರೂ ಎಲ್ರೂ ಒಗ್ಗಟ್ಟಾಗಿ ಮತ್ತೆ ಮೋದಿಯನ್ನ ಪ್ರಧಾನಿ ಮಾಡಬೇಕು. ಈಗ ನಾವು ಯಾವುದೇ ಕಾರಣಕ್ಕೂ ವಿರಮಿಸಬಾರದೆಂದು ಕಾರ್ಯಕರ್ತರಿಗೆ ಹೇಳಿದ್ದ ಅನಂತಕುಮಾರ್ ಹೆಗಡೆಯೇ ಇದೀಗ ಕಾರ್ಯಕರ್ತರ ಸಂಪರ್ಕಕ್ಕೆ ಸಿಗದೆ ಮನೆಯಲ್ಲೇ ವಿರಮಿಸಿದ್ದಾರೆ.

## ಪೊಲೀಸ್ ಠಾಣೆಯಲ್ಲೇ ಪಿಸ್ತೂಲಿನಿಂದ ಮಿಸ್ ಫೈರಿಂಗ್



ಬೆಂಗಳೂರು: ಪೊಲೀಸ್ ಠಾಣೆಯಲ್ಲೇ ಪಿಸ್ತೂಲ್ ಪರಿಶೀಲನೆ ವೇಳೆಯಲ್ಲಿ ಮಿಸ್ ಫೈರಿಂಗ್ ಉಂಟಾಗಿ, ಠಾಣೆಯ ರೈಟರ್ ಕಾಲಿಗೆ ಗಾಯವಾಗಿರೋದಾಗಿ ತಿಳಿದು ಬಂದಿದೆ.

ಬೆಂಗಳೂರಿನ ಬೇಗೂರು ಪೊಲೀಸ್ ಠಾಣೆಯಲ್ಲಿ ಇಂದು ಎಸ್ ಬಿ ಕಾನ್ಸ್ ಟೇಬಲ್ ವೆಂಕಣ್ಣ ಎಂಬುವರು ಪಿಸ್ತೂಲ್ ಪರಿಶೀಲನೆ ವೇಳೆಯಲ್ಲಿ ಟ್ರಿಗರ್ ಪ್ರೆಸ್ ಮಾಡಿದ್ದರಿಂದ ಮಿಸ್ ಫೈರಿಂಗ್ ಉಂಟಾಗಿದೆ. ಪಿಸ್ತೂಲ್ ನಿಂದ ಹಾರಿದಂತ ಗುಂಡು, ಬೇಗೂರು ಪೊಲೀಸ್ ಠಾಣೆಯ ರೈಟರ್ ಅಂಬುದಾಸ್ ಎಂಬುವರ ಎಡಗಾಲಿಗೆ ಬಿದ್ದಿದ್ದು, ಅವರು ಗಾಯಗೊಂಡಿದ್ದಾರೆ ಎನ್ನಲಾಗುತ್ತಿದೆ. ಮಿಸ್ ಫೈರಿಂಗ್ ನಿಂದ ಗಾಯಗೊಂಡಿರುವಂತ ರೈಟರ್ ಅಂಬುದಾಸ್ ಅವರನ್ನು ಬನ್ನೇರುಘಟ್ಟ ರಸ್ತೆಯ ಅಪೋಲೋ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

## ಕಾನೂನು ಬಾಹಿರವಾಗಿ ಮಗು ದತ್ತು ಪ್ರಕರಣ

### ರೀಲ್ಸ್ ಸ್ಟಾರ್ ಸೋನು ಗೌಡ ನಾಲ್ಕು ದಿನ ಪೊಲೀಸ್ ವಶಕ್ಕೆ

ಬೆಂಗಳೂರು: ಕಾನೂನು ಬಾಹಿರವಾಗಿ ಮಗುವನ್ನು ದತ್ತು ಪಡೆದ ಆರೋಪದ ಮೇಲೆ ಬಂಧನಕ್ಕೊಳಾಗಿರುವ ಬಿಗ್ ಬಾಸ್ ಒಟಿಟಿ ಕನ್ನಡ ಸೀಸನ್ 1 ರಿಯಾಲಿಟಿ ಶೋನ ಸ್ಪರ್ಧಿ ಸೋನು ಶ್ರೀನಿವಾಸ್ ಗೌಡ ಅವರನ್ನು ಶುಕ್ರವಾರ ಕೋರ್ಟ್ ಹೆಚ್ಚಿನ ವಿಚಾರಣೆಗಾಗಿ ನಾಲ್ಕು ದಿನಗಳ ಕಾಲ ಪೊಲೀಸ್ ವಶಕ್ಕೆ ನೀಡಿದೆ.

ಬ್ಯಾಡರಹಳ್ಳಿ ಪೊಲೀಸರು ಇಂದು ಸೋನು ಗೌಡ ಅವರನ್ನು ಬೆಂಗಳೂರಿನ ಸಿಜೆಎಂ ಕೋರ್ಟ್ ಗೆ ಹಾಜರುಪಡಿಸಿದರು. ಮಗು ಪೋಷಕರನ್ನು ರಾಯಚೂರಿಗೆ ಕರೆದುಕೊಂಡು ಹೋಗಿ ಮಹಜರು ಮತ್ತು ಹೇಳಿಕೆ ಪಡೆಯಬೇಕಿದೆ. ಅಪಾರ್ಟ್ ಮೆಂಟ್ ನ ಅಕ್ಕಪಕ್ಕದ ಸ್ಥಳೀಯರ ಹೇಳಿಕೆ ಪಡೆಯಬೇಕಿದೆ. ಈ ಉದ್ದೇಶ ದಿಂದ ನಾಲ್ಕು ದಿನಗಳ ಕಾಲ ತಮ್ಮ ಕಸ್ಟಡಿ ನೀಡುವಂತೆ ಪೊಲೀಸರು ಮನವಿ ಮಾಡಿದರು.

ಪೊಲೀಸರ ಮನವಿಯನ್ನು ಪುರಸ್ಕರಿಸಿದ ಕೋರ್ಟ್, ಆರೋಪಿ ಸೋನು ಗೌಡ ಅವರನ್ನು ಮಾರ್ಚ್ 25ರ ವರೆಗೆ ಪೊಲೀಸರ ವಶಕ್ಕೆ ನೀಡಿ ಆದೇಶಿಸಿದೆ.

ಈ ವರ್ಷದ ಮಗುವನ್ನು ಅನಧಿಕೃತವಾಗಿ



ಮನೆಯಲ್ಲಿ ಇಟ್ಟುಕೊಂಡಿದ್ದ ಆರೋಪದ ಮೇಲೆ ಸೋನು ಗೌಡ ಅವರನ್ನು ಇಂದು ಬೆಳಗಿನ ಜಾವ ಬ್ಯಾಡರಹಳ್ಳಿ ಪೊಲೀಸರು ಬಂಧಿಸಿದ್ದಾರೆ. ಮಕ್ಕಳ ರಕ್ಷಣಾ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸರು ಜಂಟಿ ಕಾರ್ಯಚರಣೆ ನಡೆಸಿ ಸೋನು ಗೌಡರನ್ನು ವಶಕ್ಕೆ ಪಡೆದಿದ್ದಾರೆ.

ಮಗು ದತ್ತು ಪಡೆದಿರುವುದಾಗಿ ಸೋನು ಗೌಡ ಇತ್ತೀಚೆಗೆ ಹೇಳಿಕೊಂಡಿದ್ದರು. 8 ವರ್ಷದ ಮಗುವನ್ನು ಕಾನೂನು ಬಾಹಿರವಾಗಿ ಅವರು ದತ್ತು ಪಡೆದಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿ ರಾಜ್ಯ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಗೀತಾ ದೂರು ನೀಡಿದ್ದರು. ಜೆ.ಜೆ.ಆ್ಯಕ್ಟ್ ಅಡಿ ಬ್ಯಾಡರಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

## ಚಿಕ್ಕಮಗಳೂರು: ಕೋಟಾ ಶ್ರೀನಿವಾಸ ಪೂಜಾರಿಗೆ 25 ಸಾವಿರ ರೂ. ಹಣ ದೇಣಿಗೆ ನೀಡಿದ ಚುರುಮುರಿ ವ್ಯಾಪಾರಿ

ಚಿಕ್ಕಮಗಳೂರು: ಸರಳತೆಯಿಂದಲೇ ಗಮನ ಸೆಳೆಯುವ ಉಡುಪಿ ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೋಟ ಶ್ರೀನಿವಾಸ ಪೂಜಾರಿ ಅವರಿಗೆ ವಿಶೇಷ ವ್ಯಕ್ತಿಯೊಬ್ಬರು ದೇಣಿಗೆ ನೀಡಿದ್ದಾರೆ. ಕೋಟ ಶ್ರೀನಿವಾಸ ಪೂಜಾರಿ ಅವರ ಚುನಾವಣಾ ಖರ್ಚಿಗೆ ಚುರುಮುರಿ ವ್ಯಾಪಾರಿಯೊಬ್ಬರು 25,000 ರೂ ನೀಡಿದ್ದಾರೆ.



ಲೋಕಸಭಾ ಚುನಾವಣಾ ಪ್ರಚಾರದ ವೇಳೆ ಬಿಜೆಪಿ ಕಾರ್ಯಕರ್ತ ಹಾಗೂ ಚುರುಮುರಿ ವ್ಯಾಪಾರಿಯೋರ್ವ ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೋಟಾ ಶ್ರೀನಿವಾಸ ಪೂಜಾರಿಗೆ 25,000 ಹಣ ನೀಡಿ ಗೆಲ್ಲುವಂತೆ ಶುಭ ಹಾರೈಸಿದ್ದಾರೆ.

ಕೋಟಾ ಶ್ರೀನಿವಾಸ ಪೂಜಾರಿ ಚಿಕ್ಕಮಗಳೂರು ನಗರದಲ್ಲಿ ಚುನಾವಣಾ ಪ್ರಚಾರ ಕೈಗೊಂಡಿದ್ದಾರೆ. ಈ ವೇಳೆ ಪ್ರಚಾರಕ್ಕೆಂದು ಹೋದಾಗ ಚಿಕ್ಕಮಗಳೂರು ಹೊರವಲಯದ ತೇಗೂರು ಸರ್ಕಲ್ ನಲ್ಲಿನ ಚುರುಮುರಿ ವ್ಯಾಪಾರಿ ಲೋಕೇಶ್ ಬಾಬು ಅವರು ಕೋಟಾಗೆ 25 ಸಾವಿರ ಹಣವನ್ನ ಚುನಾವಣಾ ಖರ್ಚಿಗಾಗಿ ನೀಡಿ ಗೆಲ್ಲುವಂತೆ ಶುಭ ಹಾರೈಸಿದ್ದಾರೆ. ಹಣದ ಜೊತೆ ಎಲೆ-ಅಡಿಕೆ-ಬಾಳೆಹಣ್ಣು ಸೇರಿ ವಿವಿಧ ಹಣ್ಣುಗಳನ್ನ ನೀಡಿ ಚುನಾವಣೆಗೆ ಶುಭಕೋರಿದ್ದಾರೆ.

ಕಳೆದ 25 ವರ್ಷಗಳಿಂದ ತೇಗೂರು ಸರ್ಕಲ್ ನಲ್ಲಿ ಚುರುಮುರಿ ಅಂಗಡಿ ಇಟ್ಟಿರುವ ಲೋಕೇಶ್ ಬಿಜೆಪಿಯ ಅಪ್ಪಟ ಕಾರ್ಯಕರ್ತ. ಇಂದು ಕೋಟಾ ಪ್ರತಿಯೊಂದು ಅಂಗಡಿಗಳಿಗೆ ಹೋಗಿ ಮತಯಾಚನೆ ಮಾಡುವ ವೇಳೆ ಹಣ ನೀಡಿ ಶುಭಕೋರಿದ್ದಾರೆ.

## ಕಾರಿನಲ್ಲಿ ಸುಟ್ಟ ಸ್ಥಿತಿಯಲ್ಲಿ ಮೂವರ ಶವ ಪತ್ತೆ




ತುಮಕೂರು: ಕುಚ್ಚಂಗಿ ಕೆರೆ ಬಳಿ ಕಾರಿನಲ್ಲಿ ಸುಟ್ಟ ಸ್ಥಿತಿಯಲ್ಲಿ ಮೂವರ ಶವ ಪತ್ತೆಯಾಗಿದೆ.

ತುಮಕೂರು ತಾಲೂಕಿನ ಕುಚ್ಚಂಗಿ ಕೆರೆ ಬಳಿ ಕಾರಿನಲ್ಲಿ ಮೂವರ ಶವ ಪತ್ತೆಯಾಗಿದ್ದು, ಮೃತರ ಗುರುತು ಪತ್ತೆಯಾಗಿಲ್ಲ. ತಡರಾತ್ರಿ ಕಾರಿಗೆ ಬೆಂಕಿ ಹಚ್ಚಿರುವ ಶಂಕೆ ವ್ಯಕ್ತವಾಗಿದೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸರು ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ. ಕೋರಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ಅಧಿಕಾರ ದುರುಪಯೋಗಕ್ಕೆ ಬಿಜೆಪಿ ಬೆಲೆ ತೆರಬೇಕಾಗುತ್ತದೆ: ಶರದ್ ಪವಾರ್ ಎಚ್ಚರಿಕೆ

ಬಾರಾಮತಿ: ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಜಾರಿ ನಿರ್ದೇಶನಾಲಯ ಬಂಧಿಸಿರುವುದನ್ನು ಶುಕ್ರವಾರ ಖಂಡಿಸಿರುವ ನ್ಯಾಶನಲಿಸ್ಟ್ ಕಾಂಗ್ರೆಸ್ ಪಾರ್ಟಿ-ಶರದ್ಚಂದ್ರ ಪವಾರ್, ಪಕ್ಷದ ಅಧ್ಯಕ್ಷ ಶರದ್ ಪವಾರ್ ಅವರು, ಅಧಿಕಾರ ದುರುಪಯೋಗಕ್ಕೆ ಬಿಜೆಪಿ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.



ಮಹಾರಾಷ್ಟ್ರದ ಪುಣೆ ಜಿಲ್ಲೆಯ ಬಾರಾಮತಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶರದ್ ಪವಾರ್, ತುರ್ತು ಪರಿಸ್ಥಿತಿಯಲ್ಲಿ ಜನ ತಮ್ಮ ಶಕ್ತಿ ಪ್ರದರ್ಶಿಸಿದ ರೀತಿಯಲ್ಲೇ ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ತಮ್ಮ ಶಕ್ತಿ ತೋರಿಸುತ್ತಾರೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

ಕೇಜ್ರಿವಾಲ್ ಅವರ ಬಂಧನವನ್ನು ಉಲ್ಲೇಖಿಸಿದ ಪವಾರ್, ವಿರೋಧ ಪಕ್ಷದ ಧ್ವನಿಯನ್ನು ಹತ್ತಿಕ್ಕಲು ಫೆಡರಲ್ ಏಜೆನ್ಸಿಗಳನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

"ಕಾಂಗ್ರೆಸ್‌ನ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಲಾಗಿದೆ. ಖಾತೆಗಳು ಸ್ಥಗಿತಗೊಂಡಿದ್ದರಿಂದ ಚುನಾವಣಾ ಪ್ರಚಾರಕ್ಕಾಗಿ ಹಣಕಾಸು ನಿರ್ವಹಣೆಗೆ ಹೊಡೆತ ಬಿದ್ದಿದೆ. ಇದು ಹಳೆಯ ಪಕ್ಷವನ್ನು ಚುನಾವಣೆಗೆ ಸ್ಪರ್ಧಿಸದಂತೆ ತಡೆಯುವ ಪ್ರಯತ್ನ ಎಂಬುದನ್ನು ತೋರಿಸುತ್ತದೆ. ಈ ಹಿಂದೆ ಯಾವತ್ತೂ ಈ ರೀತಿಯ ಕ್ರಮ ಕೈಗೊಂಡಿರಲಿಲ್ಲ" ಎಂದು ಎನ್‌ಸಿಪಿ (ಎಸ್‌ಪಿ) ಮುಖ್ಯಸ್ಥರು ಹೇಳಿದ್ದಾರೆ.

ದೆಹಲಿ ಅಬಕಾರಿ ನೀತಿಗೆ ಸಂಬಂಧಿಸಿದ ಮನಿ ಲಾಂಡರಿಂಗ್ ಪ್ರಕರಣದಲ್ಲಿ ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕರೂ ಆಗಿರುವ ಕೇಜ್ರಿವಾಲ್ ಅವರನ್ನು ಇಡಿ ಗುರುವಾರ ಬಂಧಿಸಿದ್ದು, ಅವರ ಬಂಧನವನ್ನು ಪ್ರತಿಪಕ್ಷ ಇಂಡಿಯಾ ಮೈತ್ರಿಕೂಟದ ನಾಯಕರನ್ನು ಖಂಡಿಸಿದ್ದಾರೆ.

## ಮಾರ್ಚ್ 26 ರಂದು ಪ್ರಧಾನಿ ನಿವಾಸಕ್ಕೆ ಆಮ್ ಆದ್ಮಿ ಪಕ್ಷ ಘೇರಾವ್; ಕೇಜ್ರಿವಾಲ್ ಬಂಧನ ವಿರುದ್ಧ ಪ್ರತಿಭಟನೆ

ನವದೆಹಲಿ: ಆಮ್ ಆದ್ಮಿ ಪಕ್ಷ ಮಾ.26 ರಂದು ಪ್ರಧಾನಿ ನಿವಾಸಕ್ಕೆ ಘೇರಾವ್ ಹಾಕಲಿದ್ದು, ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಬಂಧನದ ವಿರುದ್ಧ ಪ್ರತಿಭಟನೆ ನಡೆಸಲಿದೆ. ಆಮ್ ಆದ್ಮಿ ಪಕ್ಷದ ಸಂಚಾಲಕ ಗೋಪಾಲ್ ರೈ ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿರುವ ಗೋಪಾಲ್ ರೈ, ಶಾಸಕರು ಹಾಗೂ ಆಮ್ ಆದ್ಮಿ ಪಕ್ಷದ ಕೌನ್ಸಿಲರ್ ಗಳಿಗೆ ಕೇಜ್ರಿವಾಲ್ ಕುಟುಂಬದವರನ್ನು ಭೇಟಿ ಮಾಡದಂತೆ ನಿರ್ಬಂಧ ವಿಧಿಸಲಾಗಿದೆ ಎಂದು ಆರೋಪಿಸಿದ್ದಾರೆ.




ಕೇಜ್ರಿವಾಲ್ ಅವರನ್ನು ಅಬಕಾರಿ ನೀತಿಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಡಿಯಲ್ಲಿ ಬಂಧಿಸಲಾಗಿತ್ತು.

"ದಿನವಿಡೀ ಕಾರ್ಯಕರ್ತರು ಮತ್ತು ಮುಖಂಡರನ್ನು ವಶಕ್ಕೆ ಪಡೆಯಲಾಗಿತ್ತು. ಕೇಜ್ರಿವಾಲ್ ಅವರ ಬಂಧನದಿಂದ ಇಡೀ ದೇಶ ದುಃಖ ಮತ್ತು ಕೋಪಗೊಂಡಿದೆ ಎಂದು ಗೋಪಾಲ್ ರೈ ಹೇಳಿದ್ದಾರೆ.

ಶನಿವಾರ ಬೆಳಗ್ಗೆ 10 ಗಂಟೆಗೆ ಎಎಪಿಯ ಎಲ್ಲಾ ಶಾಸಕರು, ಕೌನ್ಸಿಲರ್‌ಗಳು, ಪದಾಧಿಕಾರಿಗಳು, ಇಂಡಿಯಾ ಮೈತ್ರಿಕೂಟದ ಪ್ರತಿನಿಧಿಗಳು ಪ್ರಜಾಪ್ರಭುತ್ವವನ್ನು ಉಳಿಸುವ ಪ್ರತಿಜ್ಞೆಯನ್ನು ತೆಗೆದುಕೊಳ್ಳಲಿದ್ದಾರೆ. ಭಗತ್ ಸಿಂಗ್, ರಾಜಗುರು ಮತ್ತು ಸುಖದೇವ್ ಅವರ ಹುತಾತ್ಮ ದಿನವಾದ ಶನಿವಾರದಂದು ನಾವು ಶಹೀದಿ ಪಾರ್ಕ್‌ನಲ್ಲಿ ಸೇರುತ್ತೇವೆ ಎಂದು ದೆಹಲಿ ಸಚಿವರು ಹೇಳಿದರು.

ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಕೂಡ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಮಾ.24 ರಂದು ಪ್ರಧಾನಿ ನರೇಂದ್ರ ಮೋದಿ ಅವರ ಪ್ರತಿಕೃತಿಗಳನ್ನು ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ದಹಿಸಲಾಗುತ್ತದೆ. ಮಾ.25 ರಂದು ಹೋಳಿ ಹಬ್ಬ ಇದ್ದು ಯಾವುದೇ ಕಾರ್ಯಕ್ರಮ ನಡೆಸುವುದಿಲ್ಲ. ಮಾ.26 ರಂದು ಪ್ರಧಾನ ಮಂತ್ರಿ ನಿವಾಸಕ್ಕೆ ಘೇರಾವ್ ಹಾಕಲಿದ್ದೇವೆ ಎಂದು ರೈ ಹೇಳಿದ್ದಾರೆ.

ಎಎಪಿ ರಾಷ್ಟ್ರೀಯ ಸಂಚಾಲಕರ ಬಂಧನದ ವಿರುದ್ಧ ಭಾರತ ಬ್ಲಾಕ್ ಘಟಕಗಳ ನಡುವೆ ಚರ್ಚೆಯ ನಂತರ ಶೀಘ್ರದಲ್ಲೇ ಜಂಟಿ ಚಳವಳಿಯನ್ನು ಘೋಷಿಸಲಾಗುವುದು ಎಂದು ಅವರು ಹೇಳಿದರು.

## ಕುಂದಾನಗರಿಗೆ ತಂಪೆರೆದ ಮಳೆರಾಯ

ಬೆಳಗಾವಿ: ಮಳೆ ಸುರಿಯದೇ ಬೇಸಿಗೆಯ ಒಣ ವಾತಾವರಣ ಮುಂದುವರೆದಿದ್ದ ಬೆಳಗಾವಿ ಪರಿಸರ ಶುಕ್ರವಾರ ಬದಲಾವಣೆ ಕಂಡಿದ್ದು ತುಂತುರು ಮಾದರಿಯ ಮಳೆ ಸುರಿದು ಮಳೆಗಾಲವಿದು ಎಂದು ಜನರಿಗೆ ನೆನಪಿಸಿದೆ.

ಮಳೆಗೆ ಹೆಸರಾದ ಮಲೆನಾಡ ಗಡಿಯ ಬೆಳಗಾವಿಯಲ್ಲಿ ಇತ್ತೀಚಿನ ವರ್ಷಗಳಲ್ಲಿ ಕಡಿಮೆಯಾಗಿದ್ದರೂ ಈ ವರ್ಷವಂತೂ ತಿಂಗಳೂ ಕಳೆದರೂ ಮಳೆ ಹನಿಯಿಲ್ಲದೇ ಬೇಸಿಗೆಯ ಉಷ್ಣ ವಾತಾವರಣ ಮುಂದುವರೆದಿತ್ತು.

ನಗರಕ್ಕೆ ನೀರು ಪೂರೈಸುವ ಹಿಡಕಲ್ ಹಾಗೂ ರಕ್ಕಸಕೊಪ್ಪ ಜಲಾಶಯಗಳಲ್ಲಿ ನೀರು ತಳಕ್ಕೆ ತಲುಪಿ ಕನಿಷ್ಠ ಹತ್ತು ದಿವಸಕ್ಕೊಮ್ಮೆ ಒಂದು ತಾಸು ನೀರು ನಲ್ಲಿಗಳಲ್ಲಿ ನೀರು ಕಾಣುತ್ತಿದ್ದ ಜನತೆಯ ಮುಖಭಾವ ಶುಕ್ರವಾರ ಹೇಳಿಕೊಳ್ಳುವಂಥ ಮಳೆಯಾಗದಿದ್ದರೂ ಹೇಗೋ ಈ ವರ್ಷದ 'ಮಾನ್ಸೂನ್ ಸೆಟ್' ಆಯ್ತು ಬಿಡಿ ಎಂಬ ನಿರಾಳತೆ ಪಡೆದಂತಾಗಿದೆ.

## ಜೆಎನ್ ಯುಎಸ್ ಯು ಚುನಾವಣೆ: ಎಬಿವಿಪಿ ಅಭ್ಯರ್ಥಿ ವಿರುದ್ಧ ವಿಶೇಷ ಚೇತನ ವಿದ್ಯಾರ್ಥಿಗಳಿಂದ ಪ್ರತಿಭಟನೆ

ನವದೆಹಲಿ: ಜೆಎನ್ ಯು ಎಸ್ ಯು ಚುನಾವಣೆಯಗೆ ಸ್ಪರ್ಧಿಸಿರುವ ಎಬಿವಿಪಿ ಅಭ್ಯರ್ಥಿ ವಿರುದ್ಧ ವಿಶೇಷ ಚೇತನ ವಿದ್ಯಾರ್ಥಿಗಳು ಪ್ರತಿಭತನೆ ನಡೆಸುತ್ತಿದ್ದಾರೆ. ಚುನಾವಣೆ ನಡುವೆ ಅಭ್ಯರ್ಥಿಯೋರ್ವ ಅವಹೇಳನಕಾರಿ ಹೇಳಿಕೆ ನೀಡಿರುವುದರ ವಿರುದ್ಧ ವಿಶೇಷ ಚೇತನ ವಿದ್ಯಾರ್ಥಿಗಳು ಉಪವಾಸ ಪ್ರತಿಭಟನೆ ನಡೆಸುತ್ತಿದ್ದಾರೆ. ವಿದ್ಯಾರ್ಥಿಗಳು ಜೆಎನ್ ಯು ವಿವಿ ಚುನಾವಣೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುತ್ತಿದ್ದಾರೆ. ಅಧ್ಯಕ್ಷೀಯ ಚರ್ಚೆಯ ಪ್ರಶ್ನೋತ್ತರ ವೇಳೆಯಲ್ಲಿ ಆರ್‌ಎಸ್‌ಎಸ್ ಸಂಯೋಜಿತ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನ ಅಧ್ಯಕ್ಷೀಯ ಅಭ್ಯರ್ಥಿ ಉಮೇಶ್ ಚಂದ್ರ ಅಜ್ಮೀರಾ ಅವರ ಹೇಳಿಕೆಯನ್ನು ವಿರೋಧಿಸಿ ವಿಕಲಚೇತನ ಮತದಾರರು ಕೆಲವು ಸಮುದಾಯದ ಸದಸ್ಯರೊಂದಿಗೆ ಉಪವಾಸ ಸತ್ಯಾಗ್ರಹ ನಡೆಸಿದರು.



# ದಾಖಲೆ ಇಲ್ಲದ 8.30 ಲಕ್ಷ ನಗದು ವಶ

ರಾಯಚೂರು: ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾ-ರಿಯಾದ ನಂತರ ಕಳೆದ 24 ಗಂಟೆಗಳ ಅವಧಿಯಲ್ಲಿ ಜಿಲ್ಲೆಯ ವಿವಿಧ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ನಡೆಸಿ ಪೊಲೀಸರು ದಾಖಲೆ ಇಲ್ಲದ 8.30 ಲಕ್ಷ ನಗದು ವಶಪಡಿಸಿಕೊಂಡಿದ್ದಾರೆ.

ರಾಯಚೂರು ತಾಲ್ಲೂಕಿನ ಸಿಂಗನೋಡಿ ಚೆಕ್‌ಪೋಸ್ಟ್‌ನಲ್ಲಿ ಪೊಲೀಸರು ತಪಾಸಣೆ ನಡೆಸಿದ ಸಂದರ್ಭದಲ್ಲಿ ಮಾರುತಿ ಶಿಫ್ಟ್ ಡಿಸೈರ್ ಕಾರಿನ ಡಿಕ್ಕಿಯಲ್ಲಿ ಸಾಗಿಸುತ್ತಿದ್ದ ರೂ 4 ಲಕ್ಷ, ಯರಗೇರಾ ಚೆಕ್‌ಪೋಸ್ಟ್‌ನಲ್ಲಿ ರೂ 1.30 ಲಕ್ಷ ಹಾಗೂ ಸಿಂಧನೂರು ತಾಲ್ಲೂಕಿನ ಮಣ್ಣಿಕೆರೆ ಕ್ಯಾಂಪ್‌ನಲ್ಲಿ ರೂ 3 ಲಕ್ಷ ನಗದು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ. ತಿಳಿಸಿದ್ದಾರೆ.

## ಏಪ್ರಿಲ್ 1 ರಿಂದ 10 ರವರೆಗೆ: ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ

# 5ನೇ ಸುತ್ತಿನ ಕಾಲು, ಬಾಯಿ ರೋಗ ಲಸಿಕಾ ಕಾರ್ಯಕ್ರಮವು

ಧಾರವಾಡ: ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದ(-ಎನ್.ಎ.ಡಿ.ಸಿ.ಪಿ) 5 ನೇ ಸುತ್ತಿನ ಕಾಲು, ಬಾಯಿ ಬೇನೆ ಲಸಿಕಾ ಕಾರ್ಯಕ್ರಮದ ಪೂರ್ವ ಸಿದ್ಧತೆಗಳ ಪರಿಶೀಲನೆಗಾಗಿ ಧಾರವಾಡ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಅನುಷ್ಠಾನ ಸಮಿತಿ ಸಭೆಯ ಜರುಗಿತು.

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ 5 ನೇ ಸುತ್ತಿನ ಕಾಲು, ಬಾಯಿ ರೋಗ ಲಸಿಕಾ ಕಾರ್ಯಕ್ರಮವು ಏಪ್ರಿಲ್ 1 ರಿಂದ 10 ರವರೆಗೆ ನಡೆಯಲಿದ್ದು, ಜಿಲ್ಲೆಯ ಪ್ರತಿ ದನಗಳ ಮಾರಾಟ ಕೇಂದ್ರಗಳಿಗೆ ಓರ್ವ ಅಧಿಕಾರಿ ನೇಮಕ ಮಾಡಿ ರೈತರೊಂದಿಗೆ ಚರ್ಚಿಸಿ ಅವರಿಗೆ ಅಗತ್ಯ ನೆರವು ನೀಡುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ಒಟ್ಟು 1,36,023 ದನಗಳು, 47698 ಎಮ್ಮೆಗಳು ಸೇರಿ ಒಟ್ಟು 1,84,347 ಲಕ್ಷ ಜಾನುವಾರುಗಳಿಗೆ ಲಸಿಕೆ ಹಾಕುವ ಕಾರ್ಯಕ್ರಮವಿದ್ದು, 364 ಗ್ರಾಮಗಳ 160 ವಾರ್ಡಗಳ 1904 ಬ್ಲಾಕ್ಗಳಲ್ಲಿ ಲಸಿಕೆ



ಹಾಕಲಾಗುವುದು. ಮತ್ತು 214 ಲಸಿಕೆದಾರ-ರಿದ್ದು, 4 ವಾಕ್ ಇನ್ ಕೂಲರ್, 19 ಐ.ಎಲ್.ಆರ್ ಹಾಗೂ 285 ವಾಕ್ಸಿನ್ ಕ್ಯಾರಿಯರ್ಗಳ ವ್ಯವಸ್ಥೆ ಮಾಡಲಾಗಿದೆ. 48 ಮೇಲ್ವಿಚಾರಕರನ್ನು ಲಸಿಕಾ ಕಾರ್ಯಕ್ರಮಕ್ಕಾಗಿ ನೇಮಕ ಮಾಡಲಾಗಿದೆ. ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಬೇಕೆಂದು ಅವರು ಹೇಳಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ, ಪಶುಪಾಲನಾ ಇಲಾಖೆ ಉಪನಿರ್ದೇಶಕ ಡಾ. ರವಿ ಸಾಲಿಗೌಡರ್, ಆರೋಗ್ಯ ಇಲಾಖೆಯ ಡಾ. ಮಂಜುನಾಥ ಸೊಪ್ಪಿಮಠ, ಡಾ.ಪ್ರಕಾಶ ಬೆನ್ನೂರ, ಡಾ. ಮಹೇಶ ಕುರಿ, ಡಾ.ದೇವೇಂದ್ರ ಲಮಾಣಿ ಹಾಗೂ ಇತರರು ಭಾಗವಹಿಸಿದ್ದರು.

# ವಿಶ್ವರಂಗಭೂಮಿ ದಿನಾಚರಣೆ ಅಂಗವಾಗಿ ಮೂರು ದಿನಗಳ ನಾಟಕೋತ್ಸವ ಹಾಗೂ ರಂಗಸಖ ಪ್ರಶಸ್ತಿ ಪ್ರಧಾನ ಸಮಾರಂಭ

ಬೆಳಗಾವಿ: ಬೆಳಗಾವಿ ರಂಗಸಂಪದವು ಪ್ರತಿ ವರ್ಷದಂತೆ ಇದೆ ಬುಧವಾರ ಮಾರ್ಚ 27 ರಂದು ವಿಶ್ವರಂಗಭೂಮಿ ದಿನಾಚರಣೆ ಹಮ್ಮಿಕೊಂಡಿದೆ. ಈ ಹಿನ್ನೆಲೆಯಲ್ಲಿ ದಿ:27-03-2024 ರಿಂದ ದಿ:29-03-2024ರ ವರೆಗೆ ಮೂರು ದಿನಗಳ ನಾಟಕೋತ್ಸವ ಹಾಗೂ ರಂಗಸಖ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ರಂಗಸಂಪದ ಹಾಗೂ ಭಾರತೀಯ ಜೀವವಿಮಾ ನಿಗಮ ಸಹಯೋಗದಲ್ಲಿ ನಗರದ ಲೋಕಮಾನ್ಯ ರಂಗಮಂದಿರದಲ್ಲಿ ಹಮ್ಮಿಕೊಂಡಿದೆ ಎಂದು ರಂಗಸಂಪದ ಅಧ್ಯಕ್ಷರಾದ ಡಾ.ಅರವಿಂದ ಕುಲಕರ್ಣಿ ತಿಳಿಸಿದರು.

ಅವರು ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತ ನಾಟಕೋತ್ಸವ ಮೊದಲನೆ ದಿನ ದಿ:27-03-2024 ರಂದು ಸಂಜೆ 6-00 ಗಂಟೆಗೆ ವಿಶ್ವರಂಗಭೂಮಿ ದಿನಾಚರಣೆ ಕಾರ್ಯಕ್ರಮ ಉದ್ಘಾಟನೆಯಾಗಲಿದ್ದು, ಅಂದು ಭಾರತೀಯ ಜೀವ ವಿಮಾ ನಿಗಮದ ಹಿರಿಯ ವಿಭಾಗಾಧಿಕಾರಿಗಳಾದ ಶ್ರೀ.ಬಿ.ಪಿ.ರವಿ ಅವರು ಮುಖ್ಯ ಅತಿಥಿಗಳಾಗಿ ಆಗಮಿಸುವರು.

ರಂಗಸಂಪದ ಪೋಷಕರು ಹಾಗೂ ಹಿರಿಯ ನ್ಯಾಯವಾದಿಗಳಾದ ಶ್ರೀ.ಎಸ್.ಎಂ.ಕುಲಕರ್ಣಿ ಇವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ರಂಗಸಂಪದ ಗೌರವಾಧ್ಯಕ್ಷರಾದ ಶ್ರೀ ಶ್ರೀಪತಿ ಮಂಜನಬೈಲು ಹಾಗೂ ಡಾ.ಅರವಿಂದ ಕುಲಕರ್ಣಿ ಉಪಸ್ಥಿತರಿರುವರು ಎಂದು ತಿಳಿಸಿದ ಅವರು ರಂಗಸಂಪದ ಕೊಡಮಾಡುವ 2024ರ ಸಾಲಿನ ರಂಗಸಖ ಪ್ರಶಸ್ತಿ ಪ್ರಧಾನ ಸಮಾರಂಭವು ನಡೆಯಲಿದ್ದು, 2024ರ "ರಂಗಸಖ" ಪ್ರಶಸ್ತಿಯನ್ನು, ಖ್ಯಾತ ರಂಗಕರ್ಮಿ ಶ್ರೀ ವಿನೋದ ಅಂಬೇಕರ, ಗುಳೇದಗುಡ್ಡ ಇವರಿಗೆ ಪ್ರಧಾನ ಮಾಡಲಾಗುವುದು ಎಂದು ಡಾ. ಅರವಿಂದ ಕುಲಕರ್ಣಿ ತಿಳಿಸಿರು.

ಅದರಂತೆ ರಂಗಸಂಪದ ಹಿರಿಯ ಕಲಾವಿದರಾದ ಶ್ರೀಮತಿ ನಲಿನಿ ವಿದ್ಯಾಸಾಗರ ಹಾಗೂ ಶ್ರೀ ಗುರುದತ್ತ ಪೆಡ್ನೇಕರ ಅವರಿಗೆ ಸನ್ಮಾನ ಕಾರ್ಯಕ್ರಮವು ಜರುಗಲಿದೆ ಎಂದ ಅವರು ನಂತರ ಗಮ್ಯ ತಂಡ, ಶ್ರೀರಂಗಪಟ್ಟಣ ಇವರಿಂದ ಹಾಸ್ಯ ನಾಟಕ "ಪರಿಣಯ ಪ್ರಸಂಗ" ಪ್ರದರ್ಶನವಾಗಲಿದೆ. ರಚನೆ/ಸಂಗೀತ ಶ್ರೀ ಮುರಳಿ ಶೃಂಗೇರಿ, ವಿನ್ಯಾಸ/ನಿರ್ದೇಶನ ಶ್ರೀ ರಮೇಶ ಬೆಣಚಲ್ ಅವರದ್ದಾಗಿದೆ.

ನಾಟಕೋತ್ಸವ ಎರಡನೆ ದಿನ ದಿನಾಂಕ:28-03-2024 ರಂದು "ಪರಿಮಳದವರು" ನಾಟಕಕ್ಕೆ ಕಾಣಿಕೆ ನೀಡಿದ ಮಹಾನುಭಾವರನ್ನು ಸನ್ಮಾನಿಸಲಾಗುವುದು. ನಂತರ ರಂಗ ಆರಾಧನಾ ಸಾಂಸ್ಕೃತಿಕ ಸಂಘಟನೆ, ಸವದತ್ತಿ ಇವರಿಂದ "ಬಾಸಿಂಗ ಬಲ" ನಾಟಕ ಪ್ರದರ್ಶನವಾಗಲಿದೆ. ರಚನೆ: ಶ್ರೀ ಶ್ರೀನಿವಾಸ ವೈದ್ಯ, ರಂಗರೂಪ/ನಿರ್ದೇಶನ ಶ್ರೀ.ಝುಕೀರ ನದಾಫ್ ಅವರದ್ದಾಗಿದೆ.

ನಾಟಕೋತ್ಸವ ಕೊನೆಯ ದಿನ ದಿನಾಂಕ:29-03-2024 ರಂದು ರಂಗಸಂಪದ ಬೆಳಗಾವಿ ತಂಡದಿಂದ ಶ್ರೀ.ರಾಘವೇಂದ್ರ ಸ್ವಾಮಿ ಜೀವನಾಧಾರಿತ ನಾಟಕ "ಪರಿಮಳದವರು" ಪ್ರದರ್ಶನಗೊಳ್ಳಲಿದೆ. ರಚನೆ ಶ್ರೀ ಜಿ.ಬಿ.ಜೋಷಿ (ಜಡಭರತ), ನಿರ್ದೇಶನ ಶ್ರೀ ಶ್ರೀಪತಿ ಮಂಜನಬೈಲು ಅವರದಾಗಿದೆ ಅದರಂತೆ ಈ ನಾಟಕೋತ್ಸವಕ್ಕೆ ಎಲ್ಲ ರಂಗ ಪ್ರೀಯರು ಆಗಮಿಸಿ ನಾಟಕಗಳನ್ನು ವೀಕ್ಷಿಸಲು ರಂಗಸಂಪದ ಅಧ್ಯಕ್ಷರಾದ ಡಾ.ಅರವಿಂದ ಕುಲಕರ್ಣಿ ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ರಂಗಸಂಪದ ಕಾರ್ಯದರ್ಶಿಗಳಾದ ಶ್ರೀ.ಪ್ರಸಾದ ಕಾರಜೋಳ, ಶ್ರೀ.ಗುರುನಾಥ ಕುಲಕರ್ಣಿ, ಶ್ರೀ.ರಾಮಚಂದ್ರ ಕಟ್ಟಿ, ಅನಂತ ಪಪ್ಪು, ಮುಂತಾದವರು ಉಪಸ್ಥಿತರಿದ್ದರು.

# ನಿವೃತ್ತ ಐಎಎಸ್ ಅಧಿಕಾರಿಗೆ ಮಣೆ ಹಾಕಿದ ಕಾಂಗ್ರೆಸ್




ರಾಯಚೂರು: ಲೋಕಸಭೆ ಚುನಾವಣೆಯಲ್ಲಿ ರಾಯಚೂರು ಎಸ್.ಟಿ.ಮೀಸಲು ಲೋಕಸಭಾ ಕ್ಷೇತ್ರದಲ್ಲಿ ಪಕ್ಷದೊಳಗೆ ಸಮಥ-ರ್ ಅಭ್ಯರ್ಥಿ 'ಕೈ' ಸಿಗದ ಕಾರಣ ಕಾಂಗ್ರೆಸ್ ಪಕ್ಷವು ನಿವೃತ್ತ ಐಎಎಸ್ ಅಧಿಕಾರಿಯನ್ನೇ ಚುನಾವಣಾ ಕಣಕ್ಕೆ ಇಳಿಸಲು ನಿರ್ಧರಿಸಿದೆ. ನಿರೀಕ್ಷೆಯಂತೆ ಜಿ.ಕುಮಾರ ನಾಯಕ ಅವರಿಗೆ ಪಕ್ಷದ ಟಿಕೆಟ್ ಪ್ರಕಟಿಸಿದೆ.

ಜಿಲ್ಲೆಯಲ್ಲಿ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಗಳ ಸಂಖ್ಯೆ ಅಧಿಕ ಇದ್ದರೂ ಜಿಲ್ಲೆಯಲ್ಲಿರುವ ಎರಡು ಬಣಗಳ ರಾಜಕೀಯವೇ ಹೈಕಮಾಂಡಗೆ ತಲೆ ನೋವು ಆಗಿತ್ತು. ಜಿಲ್ಲೆಯವರಿಗೆ ಪರಿಚಿತರೇ ಆಗಿರುವ ನಿವೃತ್ತ ಐಎಎಸ್ ಅಧಿಕಾರಿ ಜಿ.ಕುಮಾರ ನಾಯಕಗೆ ಟಿಕೆಟ್ ಘೋಷಣೆ ಮಾಡಿದ ನಂತರ ಗೊಂದಲಕ್ಕೂ ತೆರೆ ಬಿದ್ದಿದೆ.

ಜಿ.ಕುಮಾರ ನಾಯಕ ಅವರು ನೇರವಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನೇ ಸಂಪರ್ಕಿಸಿ ರಾಯಚೂರು ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಅವಕಾಶ ಕಲ್ಪಿಸುವಂತೆ ಕೋರಿದ್ದರು. ಖರ್ಗೆ ಅವರು ಜಿಲ್ಲೆಯಲ್ಲಿರುವ ಕಾಂಗ್ರೆಸ್‌ನ ಎರಡೂ ಬಣಗಳ ಮುಖಂಡರೊಂದಿಗೆ ಪ್ರತ್ಯೇಕವಾಗಿ ಸಮಾಲೋಚನೆ ನಡೆಸಿದ್ದರು. ಎರಡೂ ಬಣಗಳು ಸಹಮತ ವ್ಯಕ್ತಪಡಿಸಿದ ನಂತರವೇ ತಮ್ಮ ನಿರ್ಧಾರ ಪ್ರಕಟಿಸಿ ಜಾಣ್ಮೆಯನ್ನು ತೋರಿದ್ದಾರೆ.

ಕುಮಾರ ನಾಯಕ ಎರಡು, ಮೂರು ತಿಂಗಳಿಂದ ನಗರದ ಹೋಟೆಲೊಂದರಲ್ಲಿ ರೂಮ್ ಮಾಡಿಕೊಂಡು ರಾಜ-ಕೀಯ ನಾಯಕರನ್ನು ಸಂಪರ್ಕಿಸಿ ರಾಜಕೀಯ ವೇದಿಕೆ ಗಟ್ಟಿಮಾಡಿಕೊಂಡಿದ್ದರು. ಕುಮಾರನಾಯಕ ಅವರಿಗೆ ಟಿಕೆಟ್ ಪ್ರಕಟಗೊಂಡು ಕಾಂಗ್ರೆಸ್ ಅಭ್ಯರ್ಥಿ ಯಾರು ಎನ್ನುವ ಕುತೂಹಲಕ್ಕೂ ತೆರೆ ಬಿದ್ದಿದೆ.

# ಜಿಲ್ಲೆಯಾದ್ಯಂತ ಪ್ರತಿ ಚೆಕ್ ಪೋಸ್ಟ್‌ಗೆ 2 ಸಿಸಿ ಕ್ಯಾಮರಾಗಳ ಅಳವಡಿಕೆ



ಧಾರವಾಡ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲೆಯಾದ್ಯಾಂತ ಒಟ್ಟು 24 ಚೆಕ್ ಪೋಸ್ಟಗಳನ್ನು ಸ್ಥಾಪಿಸಲಾಗಿದ್ದು, ಪ್ರತಿ ಚೆಕ್ಪೋಸ್ಟಗೆ 2 ಸಿ.ಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಚುನಾವಣಾ ಕಂಟ್ರೋಲ್ ರೂಮ್ದಲ್ಲಿ ಇವುಗಳನ್ನು ನೇರ ಸಂಪರ್ಕಗೋಳಿಸಿ ನಿರಂತರ ನಿಗಾಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾ-ರಿಗಳಾದ ದಿವ್ಯ ಪ್ರಭು ಅವರು ತಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಚೆಕ್ಪೋಸ್ಟ್‌ನಲ್ಲಿನ ಸಿಬ್ಬಂಧಿಗಳ ಚಲನವಲನಗಳನ್ನುಜಿಲ್ಲಾಧಿಕಾರಿಗಳ ಕಛೇರಿಯ ಆವರಣದಲ್ಲಿ ಸ್ಥಾಪಿಸಿರುವ ಕಂಟ್ರೋಲ್ ರೂಮ್ನಿಂದ ಪ್ರತಿ ಶಿಫ್ಟ್‌ನಲ್ಲಿ 3 ಜನ ಸಿಬ್ಬಂಧಿಗಳು 03 ಶಿಫ್ಟ್‌ನಲ್ಲಿ ಪರಿಶೀಲಿಸುತ್ತಾರೆ.

ಅದರಂತೆ ಎಫ್.ಎಸ್.ಟಿ., ವಿ.ಎಸ್.ಟಿ. ಹಾಗೂ ಸೆಕ್ಟರ್ ಅಧಿಕಾರಿಗಳ ಒಟ್ಟು 203 ವಾಹನಗಳಿಗೆ ಜಿ.ಪಿ.ಎಸ್. ಅಳವಡಿಸಲಾಗಿದೆ. ಕಂಟ್ರೋಲ್ ರೂಮ್ನಿಂದ ಪ್ರತಿ ಶಿಫ್ಟ್‌ನಲ್ಲಿ 3 ಜನ ಸಿಬ್ಬಂಧಿಗಳು 03 ಶಿಫ್ಟ್‌ನಲ್ಲಿ ಇವುಗಳನ್ನು ಪರಿಶೀಲಿಸುತ್ತಾರೆ. ಈ ಕಾರ್ಯಗಳ ನೋಡಲ್ ಅಧಿಕಾರಿಯಾಗಿ ಕಕೊಅಮಂಡಳಿ ಧಾರವಾಡ ವಿಭಾಗ ಕಾರ್ಯಪಾಲಕ ಅಭಿಯಂತರ ಎಸ್.ವಿ.ಹಿರೇಮಠ ಅವರನ್ನು ನೇಮಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಮಾ.25 ರಂದು ಶ್ರೀ ಯೋಗಿನಾರೇಯಣ ಯತೀಂದ್ರ ಜಯಂತಿ

ಧಾರವಾಡ: ಮಾ.25 ರಂದು ಶ್ರೀ ಯೋಗಿನಾರೇಯಣ ಯತಿಂದ್ರ (ಕೈವಾರ ತಾತಯ್ಯ) ಜಯಂತಿಯನ್ನು ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಶ್ರೀ ಯೋಗಿನಾರೇಯಣ ಯತೀಂದ್ರ ಜಯಂತಿಯನ್ನು ಮಾರ್ಚ್ 25, 2024 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಏರ್ಪಡಿಸಲಾಗಿದೆ.

ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಲ್ಲಿ ಇರುವ ಹಿನ್ನಲೆಯಲ್ಲಿ ಶ್ರೀ ಯೋಗಿನಾರೇಯಣ ಯತಿಂದ್ರ (ಕೈವಾರ ತಾತಯ್ಯ) ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಗುವುದು. ಕಾರ್ಯಕ್ರಮಕ್ಕೆ ಜಿಲ್ಲಾಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಆಗಮಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನಸ್ನೇಹಿ ಅಧಿಕಾರಿ ಎಂಬ ಪ್ರಶಂಸೆಗೆ ಪಾತ್ರವಾದ ವಿ.ಎನ್.ಪಾಟೀಲ

# ಸಚಿವ ಸತೀಶ ಜಾರಕಿಹೊಳಿ ವಿಶೇಷ ಕರ್ತವ್ಯ ಅಧಿಕಾರಿಗೆ ಸುವರ್ಣ ಕನ್ನಡಿಗ ಪುರಸ್ಕಾರ

ಹುಕ್ಕೇರಿ: ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರ ವಿಶೇಷ ಕರ್ತವ್ಯ ಅಧಿಕಾರಿ ವಿ.ಎನ್.ಪಾಟೀಲ ಅವರು ಜನಸ್ನೇಹಿ ಅಧಿಕಾರಿ ಎಂಬ ಪ್ರಶಂಸೆಗೆ ಪಾತ್ರವಾಗಿದ್ದಾರೆ.

ಹೊಸತನಗಳ ಹರಿಕಾರ ಸಚಿವ ಸತೀಶ ಜಾರಕಿಹೊಳಿ ಅವರ ವಿಭಿನ್ನ ಹಾಗೂ ವಿಶಿಷ್ಟ ಆಲೋಚನೆಗಳಂತೆ ವಿ.ಎನ್.ಪಾಟೀಲ ಅವರು ಲೋಕೋಪಯೋಗಿ ಇಲಾಖೆಯಲ್ಲಿ ವಿನೂತನ ಯೋಜನೆಗಳನ್ನು ಜಾ-ರಿಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಈ ಮೂಲಕ ಹೊಸತನಗಳಿಗೆ ನಾಂದಿ ಹಾಡಿ ಲೋಕೋಪಯೋಗಿ ಇಲಾಖೆಗೆ ಜನೋಪಯೋಗಿ ಪಟ್ಟ ತಂದುಕೊಡಲು ಶ್ರಮಿಸುತ್ತಿದ್ದಾರೆ.

ವಿ.ಎನ್.ಪಾಟೀಲರ ಸೇವಾವಧಿಯಲ್ಲಿ ನಿರ್ಮಿಸಿರುವ ಅನೇಕ ಯೋಜನೆಗಳು ಇಂದಿಗೂ ಅಚ್ಚಳಿಯದೇ ಹಾಗೆಯೇ



ಉಳಿದಿವೆ. ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು ಮತ್ತು ಸಾರ್ವಜನಿಕ ವಲಯದಲ್ಲಿ ವಿಎನ್ ಇಲ್ಲವೇ ಗೌಡರು ಎಂದೇ ಚಿರಪರಿಚಿತರಾಗಿರುವ ಪಾಟೀಲರ ಸೇವಾ ದಕ್ಷತೆಗೆ ಈ ಹಿಂದೆ ಪ್ರತಿಷ್ಠಿತ ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಅರಸಿ ಬಂದಿದೆ.

ತಾಂತ್ರಿಕ ಪ್ರಾವಿಣ್ಯತೆಯ ಮಾಹಿತಿ ಖಣಿಜ ಎಂದೇ ಖ್ಯಾತಿವೆತ್ತ ವಿ.ಎನ್.ಪಾಟೀಲ ಅವರಿಗೆ ಏಷ್ಯಾನೆಟ್ ಸುವರ್ಣ ನ್ಯೂಸ್ ಮತ್ತು ಕನ್ನಡಪ್ರಭ ಕೊಡಮಾಡುವ ಪ್ರತಿಷ್ಠಿತ ಸುವರ್ಣ ಕನ್ನಡಿಗ ವಿಶೇಷ ಗೌರವ ಪುರಸ್ಕಾರಕ್ಕೆ ಭಾಜನವಾಗಿದ್ದಾರೆ.

ಹುಕ್ಕೇರಿ ತಾಲೂಕು ಸೇರಿದಂತೆ ಜಿಲ್ಲೆಯ ವಿವಿಧ ಕಡೆಗಳಲ್ಲಿ ಸಾಥ-ರ್ಕ ಕರ್ತವ್ಯ ನಿರ್ವಹಿಸಿದ್ದಾರೆ. ವಯಸ್ಸು ದೇಹಕ್ಕೆ ಹೊರತು ಮನಸ್ಸಿಗಲ್ಲ ಎನ್ನುವಂತೆ ಚಿರಯೌವನದ ಪ್ರತೀಕದಂತಿರುವ ಪಾಟೀಲರು ಸದ್ಯ ಸಚಿವ ಸತೀಶ ಜಾರಕಿಹೊಳಿ ಅವರ ವಿಶೇಷ ಕರ್ತವ್ಯಾಧಿಕಾರಿಯಾಗಿ ತಮ್ಮ ಸಾರ್ವಜನಿಕ ಜೀವನದ ಎರಡನೇ ಇನ್ನಿಂಗ್ಸ್ ಆಡುತ್ತಿದ್ದಾರೆ.

ಬಹುಕಾಲ ಬಾಳಿಕೆ ಬರುವಂಥ ಗುಣಮಟ್ಟದ ಕೆಲಸಗಳನ್ನು ಮಾಡಿಸಿದ್ದಾರೆ. ಇಲಾಖೆಗೆ ಸಾಕಷ್ಟು ಆಸ್ತಿಗಳನ್ನು ಸೃಜಿಸಿದ್ದಾರೆ. ಸೇವಾವಧಿಯಲ್ಲಿ ಒಂದೇ ಒಂದು ಕಪ್ಪು ಚುಕ್ಕೆ ಬರದಂತೆ ಎಚ್ಚರಿಕೆ ವಹಿಸಿ ಅಧಿಕಾರ ನಡೆಸಿದ ವಿಎನ್, ಸಮಾಜದ ಕಟ್ಟಕಡೆಯ ವ್ಯಕ್ತಿಗಳಿಗೂ ನ್ಯಾಯ ಒದಗಿಸಿದ್ದಾರೆ.

ಮೇಲಧಿಕಾರಿಗಳು ಮತ್ತು ಕೆಳ ಹಂತದ ಸಿಬ್ಬಂದಿಗಳ ಪಾಲಿನ ಅಚ್ಚುಮೆಚ್ಚಿನ ಅಧಿಕಾರಿ ಎನಿಸಿರುವ ಪಾಟೀಲರು, ಗುತ್ತಿಗೆದಾರರ ಪಾಲಿಗೂ ಆತ್ಮೀಯ ಮಿತ್ರನಂತೆ ವರ್ತಿಸುತ್ತಿದ್ದರು. ಎಂಥ-'ಹದ್ದೇ ಜಟಿಲ ಸಮಸ್ಯೆಯನ್ನೂ ಸಂಯಮ-ಸಹನೆಯಿಂದ ಆಲಿಸಿ ಕ್ಷಣಾರ್ಧದಲ್ಲೇ ಪರಿಹರಿಸುವ ಮೂಲಕ ತಮ್ಮ ಚಾಕಚಕ್ಯತೆ ಮೆರೆದಿದ್ದರು. ಸರ್ಕಾರ ಮತ್ತು ಸಾರ್ವಜನಿಕರ ನಡುವಿನ ಸಂಪರ್ಕದ ಕರ್ತವ್ಯವನ್ನು ಯಶಸ್ವಿಯಾಗಿ ನಿಭಾಯಿಸಿದ್ದಾರೆ. ತನ್ಮೂಲಕ ದಕ್ಷ ಆಡಳಿತಗಾರ ಎನ್ನುವ ಹಿರಿಮೆಗೆ ಪಾತ್ರವಾಗಿದ್ದಾರೆ. ಪಾದರಸದಂತೆ ಚಲನಾಶೀಲತೆ ಮೈಗೂಡಿಸಿಕೊಂಡಿದ್ದ ಪಾಟೀಲರ ಕರ್ತವ್ಯಪ್ರಜ್ಞೆ ಪಾಠ ಇತರ ಅಧಿಕಾ-ರಿಗಳಿಗೆ ಮಾದರಿಯಾಗಿದೆ. ನಿತ್ಯ ಹಸನ್ಮುಖಿ, ಲವಲವಿಕೆ ಅವರ ಯಶಸ್ಸಿ ಗುಟ್ಟುಗಳು.

ಗುಣಮಟ್ಟದ ರಸ್ತೆ, ಸೇತುವೆ, ಬಹುಮಹಡಿ ಕಟ್ಟಡ, ಶೈಕ್ಷಣಿಕ ಶಾಲಾ-ಕಾಲೇಜು, ವಸತಿ ನಿಲಯ, ಶಿಥಿಲಾವಸ್ಥೆಯಲ್ಲಿನ ಕಟ್ಟಡಗಳ ನವೀಕರಣ ಹೀಗೆ ಅನೇಕ ಕಾಮಗಾ-ರಿಗಳನ್ನು ನಿರ್ಮಿಸುವಲ್ಲಿ ಪಾಟೀಲರ ಪಾತ್ರ ಪ್ರಮುಖವಾಗಿದೆ. ಮಹಾರಾಷ್ಟ್ರ, ಗೋವಾ ರಾಜ್ಯಗಳ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಅಚ್ಚುಕಟ್ಟಾಗಿ ನಿರ್ಮಿಸುವ ಮೂಲಕ ನೆರೆ ರಾಜ್ಯ ನಾಚುವಂತೆ ಮಾಡಿದ್ದಾರೆ.

# ಗ್ರಾಮಗಳಲ್ಲಿನ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವಿಗಾಗಿ ಸಹಾಯವಾಣಿ 08362448551 ಆರಂಭ

ಧಾರವಾಡ: ಧಾರವಾಡ ತಾಲೂಕನ್ನು ಬರಪೀಡಿತ ತಾಲ್ಲೂಕು ಎಂದು ಸರ್ಕಾರವು ಘೋಷಣೆ ಮಾಡಿರುವುದರಿಂದ ಬರಪೀಡಿತ ತಾಲೂಕುಗಳಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಒದಗಿಸಲು ಜಿಲ್ಲಾಡಳಿತ ಮತ್ತು ಜಿಲ್ಲಾಪಂಚಾಯತದಿಂದ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.

ಸಾರ್ವಜನಿಕರು ತಮ್ಮ ಗ್ರಾಮದಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ಸಮಸ್ಯೆಗಳ ಕುರಿತು ಧಾರವಾಡ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಕಚೇ-ರಿಯ ಸಹಾಯವಾಣಿ ಸಂಖ್ಯೆ : 08362448551 ಗೆ ಕರೆ ಮಾಡಿ ಪರಿಹಾರವನ್ನು ಪಡೆಯಬಹುದಾಗಿದೆ ಎಂದು ಧಾರವಾಡ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಡೀ ಭಾರತದಲ್ಲೇ ದಾಖಲೆ ಮಟ್ಟಕ್ಕೆ ಮಾರಾಟವಾದ ಬೆಳಗಾವಿ ರೈತನ ಅರಿಶಿಣ



ಬೆಳಗಾವಿ: ಕರ್ನಾಟಕದ ಅಥಣಿ ತಾಲೂಕಿನ ಕೋಹಳ್ಳಿ ಗ್ರಾಮದ ರೈತನೊಬ್ಬ ಬೆಳೆದ ಅರಿಶಿಣ ಇಡೀ ಭಾರತದಲ್ಲಿ ದಾಖಲೆ ಮಟ್ಟಕ್ಕೆ ಮಾರಾಟವಾಗಿ ಎಲ್ಲರ ಹುಬ್ಬೇರಿಸುವಂತೆ ಮಾಡಿದ್ದಾನೆ.

ಕೋಹಳ್ಳಿ ಗ್ರಾಮದ ರೈತ ಸೈಬಣ್ಣ ಭೂಪತಿ ಪೂಜಾರಿ ಅವರ ಅರಿಶಿನ ಭಾರತದಲ್ಲಿ ಅಚ್ಚರಿಯ ದರಕ್ಕೆ ಮಾರಾಟವಾಗಿದೆ. ಇದರಿಂದ ರೈತ ಫುಲ್ ಸಂತಸ ವ್ಯಕ್ತಪಡಿಸಿದ್ದಾರೆ.

ಪ್ರತಿ ಕ್ವಿಂಟಲ್ಗೆ ಬರೋಬ್ಬರಿ 41,101 ರೂಪಾಯಿಯ ದಾಖಲೆ ಮೊತ್ತಕ್ಕೆ ಮಾರಾಟವಾಗಿದೆ. ಮೂರು ಎಕರೆ ಅರಿಶಿಣ ಬೆಳೆದ ರೈತ ಪ್ರತಿ ಎಕರೆಗೆ 25-28 ಕ್ವಿಂಟಲ್ ಅರಿಶಿನ ಇಳುವರಿ ಬಂದಿದ್ದು ಶ್ರಮಕ್ಕೆ ವರದಾನವಾಗಿದೆ.

ರೈತನು ಶೈಲಂ ತಳಿಯ ಅರಿಶಿನ ಬಿಜ ನಾಟಿ ಮಾಡಿ ಸಮರ್ಪಕ ನೀರು ಔಷಧೋಪಚಾರದೊಂದಿಗೆ ಉತ್ತಮ ಇಳುವ-ರಿಗೆ ಕಂಡಿದ್ದಾರೆ.

ಈಗಾಗಲೇ 18 ಕ್ವಿಂಟಲ್ ಅರಿಶಿನ ಮಾರಾಟವಾಗಿದ್ದು 7ಲಕ್ಷ ರೂ. ನಿವ್ವಳ ಲಾಭ ಪಡೆದಿದ್ದಾರೆ. ಪ್ರತಿ ಎಕ್ಕರೆಗೆ 30 ಸಾವಿರ ಖರ್ಚು ಮಾಡಿದ ಇವರು ಮೂರು ಎಕ್ಕರೆ ಅರಿಶಿನದಿಂದ ಅಂದಾಜು 30 ಲಕ್ಷ ಆದಾಯದ ನಿರೀಕ್ಷೆಯ ಗುರಿ ಇಟ್ಟುಕೊಂಡಿದ್ದಾರೆ.

# 'ಲೋಕ' ಚುನಾವಣೆಗೆ ಆರು ಮಹಿಳಾ ಮಣಿಗಳನ್ನ ಕಣಕ್ಕಿಳಿಸಿದ ಕಾಂಗ್ರೆಸ್

ಬೆಂಗಳೂರು: ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿಯಾಗಿ ಬಹುಮತ ಪಡೆದು ಗೆದ್ದು ಬಿಗಿರುವ ಕಾಂಗ್ರೆಸ್, ಲೋಕಸಮರಕ್ಕೆ ಸಕಲ ಸಿದ್ದತೆಯನ್ನ ನಡೆಸುತ್ತಿದೆ. ಇತ್ತ ಕಾಂಗ್ರೆಸ್ ಠಕ್ಕರ್ ಕೊಡಲು ಬಿಜೆಪಿ ಹಾಗೂ ಜೆಡಿ-ಎಸ್ ಮೈತ್ರಿಯಾಗಿದ್ದು, ಇತ್ತ ಕಮಲ-ದಳ ನಾಯಕರ ಪ್ರತಿತಂತ್ರ ರೂಪಿಸಲು ಕಾಂಗ್ರೆಸ್ ಮುಂದಾಗಿದೆ.

ಕಾಂಗ್ರೆಸ್ ಹೈಕಮಾಂಡ್ ರಾಜ್ಯದ 28 ಲೋಕಸಭಾ ಕ್ಷೇತ್ರಗಳ ಪೈಕಿ ಮೊದಲ ಪಟ್ಟಿಯಲ್ಲಿ ಏಳು ಲೋಕಸಭಾ ಕ್ಷೇತ್ರದ ಅಭ್ಯರ್ಥಿಯನ್ನ ಘೋಷಿಸಿತ್ತು. ಗುರುವಾರ ರಾತ್ರಿ ಬಿಡುಗಡೆಯಾದ ಎರಡನೇ ಪಟ್ಟಿಯಲ್ಲಿ 17 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನ ಘೋಷಿಸಿದ್ದು, ತೀವ್ರ ಗೊಂದಲವಿರುವ ನಾಲ್ಕು ಕ್ಷೇತ್ರಗಳಿಗೆ ಅಭ್ಯರ್ಥಿಯನ್ನ ಅಂತಿಮಗೊಳಿಸದೇ ಬಾಕಿ ಉಳಿಸಿಕೊಂಡಿದೆ. ಇನ್ನೂ ವಿಶೇಷ ಎಂದರೇ ಕಾಂಗ್ರೆಸ್ ಹೈಕಮಾಂಡ್ ಈ ಬಾರಿ ಮಹಿಳಾ ಮಣಿಗಳಿಗೆ ಹೆಚ್ಚಿನ ಆಧ್ಯತೆಯನ್ನ ನೀಡಿದೆ.

ಮೊದಲ ಪಟ್ಟಿಯಲ್ಲಿ ಗೀತಾ ಶಿವರಾಜ್ ಕುಮಾರ್ ಸೇರಿದಂತೆ 7 ಕ್ಷೇತ್ರಗಳಿಗೆ



ಅಭ್ಯರ್ಥಿಗಳ ಪಟ್ಟಿಯನ್ನು ಕಾಂಗ್ರೆಸ್ ಬಿಡುಗಡೆಗೊಳಿಸಿತ್ತು. ಇದೀಗ ಗುರುವಾರ ಬಿಡುಗಡೆಯಾದ 17 ಕ್ಷೇತ್ರಗಳ ಪೈಕಿ ದಾವಣಗೆರೆಯಿಂದ ಸಚಿವ ಎಸ್ ಮಲ್ಲಿಕಾರ್ಜುನ್ ಅವರ ಪತ್ನಿ ಡಾ.ಪ್ರಭಾ ಮಲ್ಲಿಕಾರ್ಜುನ್, ಬಾಗಲಕೋಟೆಯಿಂದ ಸಚಿವ ಶಿವಾನಂದ ಪಾಟೀಲ್ ಅವರ ಪುತ್ರಿ ಸಂಯುಕ್ತಾ ಪಾಟೀಲ, ಬೆಂಗಳೂರು ದಕ್ಷಿಣದಿಂದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಪುತ್ರಿ ಸೌಮ್ಯ ರೆಡ್ಡಿ, ಉತ್ತರ ಕನ್ನಡದಿಂದ ಐಪಿಎಸ್ ಅಧಿಕಾರಿ ಹೇಮಂತ್ ನಿಂಬಾಳಕರ್ ಅವರ ಪತ್ನಿ ಡಾ.ಅಂಜಲಿ ನಿಂಬಾಳಕರ್, ಚಿಕ್ಕೋಡಿಯಿಂದ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳಿಗೆ ಟಿಕೆಟ್ ನೀಡಲಾಗಿದೆ.

ಆರು ಮಹಿಳೆಯಲಿರಿಗೆ ಟಿಕೆಟ್ ಕೊಟ್ಟ ಕಾಂಗ್ರೆಸ್: ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ-ಸೌಮ್ಯಾರೆಡ್ಡಿ* ಬಾಗಲಕೋಟೆ ಲೋಕಸಭಾ ಕ್ಷೇತ್ರ-ಸಂಯುಕ್ತಾ ಪಾಟೀಲ್* ದಾವಣಗೆರೆ ಲೋಕಸಭಾ ಕ್ಷೇತ್ರ-ಪ್ರಭಾ ಮಲ್ಲಿಕಾರ್ಜುನ* ಉತ್ತರ ಕನ್ನಡ ಕ್ಷೇತ್ರ-ಡಾ.ಅಂಜಲಿ ನಿಂಬಾಳ್ಕರ್* ಚಿಕ್ಕೋಡಿ ಲೋಕಸಭಾ ಕ್ಷೇತ್ರ-ಪ್ರಿಯಾಂಕಾ ಜಾರಕಿಹೊಳಿ* ಶಿವಮೊಗ್ಗ ಲೋಕಸಭಾ ಕ್ಷೇತ್ರ-ಗೀತಾ ಶಿವರಾಜ್ ಕುಮಾರ್ಕರ್ನಾಟಕದ ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿ1.ಬಾಗಲಕೋಟೆ ಲೋಕಸಭಾ ಕ್ಷೇತ್ರ-ಸಂಂ-ಮುಕ್ತಾ ಪಾಟೀಲ್2. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ-ಸೌಮ್ಯಾರೆಡ್ಡಿ3.ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರ-ಎಂ.ವಿ.ರಾಜೀವ್ ಗೌಡ4.ಮೈಸೂರು ಲೋಕಸಭಾ ಕ್ಷೇತ್ರ-ಎಂ. ಲಕ್ಷ್ಮಣ್5.ಚಿತ್ರದುರ್ಗ ಲೋಕಸಭಾ ಕ್ಷೇತ್ರ-ಬಿ.ಎನ್. ಚಂದ್ರಪ್ಪ6.ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರ-ಪದ್ಮರಾಜ್7 .ಉಡುಪಿ, ಚಿಕ್ಕಮಗಳೂರು ಕ್ಷೇತ್ರ-ಜಯಪ್ರಕಾಶ್ ಹೆಗ್ಡೆ8.ಕಲಬುರಗಿ ಲೋಕಸಭಾ ಕ್ಷೇತ್ರ-ರಾಧಾಕೃಷ್ಣ ದೊಡ್ಡಮನಿ9. ದಾವಣಗೆರೆ ಲೋಕಸಭಾ ಕ್ಷೇತ್ರ-ಪ್ರಭಾ ಮಲ್ಲಿಕಾರ್ಜುನ10.ಬೆಂಗಳೂರು ಸೆಂಟ್ರಲ್ ಕ್ಷೇತ್ರ-ಮನ್ಸೂರ್ ಅಲಿಖಾನ್11. ಉತ್ತರ ಕನ್ನಡ ಕ್ಷೇತ್ರ-ಡಾ.ಅಂಜಲಿ ನಿಂಬಾಳ್ಕರ್12.ಧಾರವಾಡ ಲೋಕಸಭಾ ಕ್ಷೇತ್ರ-ವಿನೋದ್ ಅಸೋಟಿ13.ಕೊಪ್ಪಳ ಲೋಕಸಭಾ ಕ್ಷೇತ್ರ-ರಾಜಶೇಖರ್ ಹಿಟ್ನಾಳ್14.ಬೀದರ್ ಲೋಕಸಭಾ ಕ್ಷೇತ್ರ-ಸಾಗರ್ ಖಂಡ್ರೆ15.ರಾಯಚೂರು ಲೋಕಸಭಾ ಕ್ಷೇತ್ರ-ಕುಮಾರ್ ಜಿ ನಾಯಕ್16.ಬೆಳಗಾವಿ ಲೋಕಸಭಾ ಕ್ಷೇತ್ರ-ಮೃಣಾಲ್ ಹೆಬ್ಬಾಳ್ಕರ್17. ಚಿಕ್ಕೋಡಿ ಲೋಕಸಭಾ ಕ್ಷೇತ್ರ-ಪ್ರಿಯಾಂಕಾ ಜಾರಕಿಹೊಳಿ 18. ಶಿವಮೊಗ್ಗ ಲೋಕಸಭಾ ಕ್ಷೇತ್ರ-ಗೀತಾ ಶಿವರಾಜ್ ಕುಮಾರ್19. ತುಮಕೂರು ಲೋಕಸಭಾ ಕ್ಷೇತ್ರ -ಎಸ್ಪಿ ಮುದ್ದಹನುಮೇಗೌಡ20. ಮಂಡ್ಯ ಲೋಕಸಭಾ ಕ್ಷೇತ್ರ-ವೆಂಕಟ-ರಾಮೇಗೌಡ (ಸ್ಟಾರ್ ಚಂದ್ರು)21. ಹಾಸನ ಲೋಕಸಭಾ ಕ್ಷೇತ್ರ-ಶ್ರೇಯಸ್ ಪಟೇಲ್22. ಬೆಂಗಳೂರು ಗ್ರಾಮಾಂತರಲೋಕಸಭಾ ಕ್ಷೇತ್ರ -ಡಿಕೆ ಸುರೇಶ್23. ವಿಜಯಪುರ ಲೋಕಸಭಾ ಕ್ಷೇತ್ರ- ಎಚ್‌ಆರ್ ಅಲ್ಗೂರ್24. ಹಾವೇರಿ ಲೋಕಸಭಾ ಕ್ಷೇತ್ರ-ಆನಂದ್ ಸ್ವಾಮಿ ಗಡ್ಡ ದೇವರಮಠ ಟಿಕೇಟ್ ನೀಡಲಾಗಿದೆ.

## ವಿದ್ಯುತ್ ವ್ಯತ್ಯಯ

ಬೆಳಗಾವಿ: ಕ.ವಿ.ಪ್ರ.ನಿ.ನಿ. ವತಿಯಿಂದ ನಾಲ್ಕನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಮಾ.23 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ವರೆಗೆ ಕೈಗೊಳ್ಳುತ್ತಿದ್ದಾರೆ. ಸದರಿ 33ಕೆ.ವ್ಹಿ. ಲೋಂಡಾ ಹಾಗೂ ಖಾನಾಪೂರ ಉಪಕೇಂದ್ರದಿಂದ ಮತ್ತು 110 ಕೆ.ವ್ಹಿ. ಖಾನಾಪೂರ ಉಪಕೇಂದ್ರದಿಂದ ಸರಬರಾಜು ಆಗುವ ಲೈಲಾ ಶುಗರ ಕಾರ್ಖಾನೆ, ದೇವಲತ್ತಿ, ಬಿದರಭಾವಿ, ಭಂಡಾರಗಾಳಿ, ಗರ್ಲಗುಂಜಿ, ತೋಪಿನಕಟ್ಟಿ, ಬೋರಗಾಂವ, ನಿಡಗಲ, ದೊಡ್ಡಹೊಸೂರ, ಸಣ್ಣಹೊಸೂರ, ಕರಂಬಳ, ಜಳಗಾ, ಕುಪ್ಪಟಗಿರಿ, ಲೋಕೋಳ್ಳಿ, ಲಕ್ಕೇಬೈಲ, ಯಡೋಗಾ, ಬಳೋಗಾ, ಜೈನಕೊಪ್ಪ, ಗಾಂಧಿನಗರ, ಹಲಕರ್ಣಿ, ಕೋರ್ಟ ಪ್ರದೇಶ, ಕೈಗಾರಿಕಾ ಪ್ರದೇಶ, ಬಾಚೋಳ್ಳಿ, ಕೌಂದಲ, ಝಾಡನಾವಗಾ, ಲಾಲವಾಡಿ, ಹೆಬ್ಬಾಳ, ನಂದಗಡ, ಕಸಬಾ ನಂದಗಡ, ಕಾರಲಗಾ, ಶಿವೊಳ್ಳಿ ಹಾಗೂ ಚಾಪಗಾಂವ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

33ಕೆ.ವ್ಹಿ. ಲೋಂಡಾ ಹಾಗೂ ಖಾನಾಪೂರ ಉಪಕೇಂದ್ರದಿಂದ ಸರಬರಾಜು ಆಗುವ ನಾಗರಗಾಳಿ, ನಾಗರಗಾಳಿ ರೇಲ್ವೆ ಸ್ಟೇಶನ್, ಮುಂಡವಾಡ, ಕುಂಬರ್ಡಾ, ತಾರವಾಡ, ಲೋಂಡಾ, ಲೋಂಡಾ ರೇಲ್ವೆ ಸ್ಟೇಶನ್, ಗುಂಜಿ, ಮೋಹಿಶೇಟ, ವಾಟ್ರೆ, ಭಾಲ್ಕೆ ಬಿ.ಕೆ, ಭಾಲ್ಕೆ ಕೆ.ಎಚ್, ಶಿಂದೋಳ್ಳಿ, ಹೊನ್ನಕಲ, ಸಾವರಗಾಳಿ, ಅಂಬೇವಾಡಿ, ತಿವೊಳ್ಳಿ, ಡೋಕೆಗಾಳಿ, ಖಾನಾಪೂರ ಪಟ್ಟಣ, ಶಿವಾಜಿ ನಗರ, ರುಮೇವಾಡಿ, ಓತೋಳ್ಳಿ, ಮೊದೇಕೊಪ್ಪ, ನಾಗುರ್ಡಾ, ರಾಮಗುರವಾಡಿ, ಅಂಬೋಳಿ, ಹರಸನವಾಡಿ, ಅಸೋಗಾ, ನೇರಸಾ, ಅಶೋಕ ನಗರ, ಮಂತುರ್ಗಾ, ಶೇಡೇಗಾಳಿ ಹಾಗೂ ಹೆಮ್ಮಡಗಾ ಪ್ರದೇಶಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಕಾರ್ಯ ಮತ್ತು ಪಾಲನಾ ಗ್ರಾಮೀಣ ವಿಭಾಗ, ಹುವಿಸಕಂನಿ ಕಾರ್ಯನಿರ್ವಾಹಕ ಇಂಜಿನೀಯರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀಶೈಲ ಮಲ್ಲಿಕಾರ್ಜುನ ಜಾತ್ರೆ: ಹೆಚ್ಚುವರಿ ಬಸ್ ಸೌಲಭ್ಯ

ಬೆಳಗಾವಿ: 2024–25 ನೇ ಸಾಲಿನ ಶ್ರೀ.ಕ್ಷೇತ್ರ ಶ್ರೀಶೈಲ ಮಲ್ಲಿಕಾರ್ಜುನ ಜಾತ್ರೆಯ ಪ್ರಯುಕ್ತ ಅಥಣಿ, ರಾಯಬಾಗ, ಗೋಕಾಕ, ಹುಕ್ಕೇರಿ, ಚಿಕ್ಕೋಡಿ, ಸಂಕೇಶ್ವರ ಹಾಗೂ ನಿಪ್ಪಾಣಿ ಘಟಕಗಳಿಂದ ಹೆಚ್ಚುವರಿ ಸಾರಿಗೆಗೆ ಸುಸಜ್ಜಿತ ವಾಹನಗಳ ಸೌಲಭ್ಯವನ್ನು ಒದಗಿಸಲಾಗುವುದು.

ಪ್ರಾಸಂಗಿಕ ಕರಾರಿನಲ್ಲಿ ಶ್ರೀ ಕ್ಷೇತ್ರ ಶ್ರೀಶೈಲ ಮಲ್ಲಿಕಾರ್ಜುನ ದರ್ಶನದ ಜೊತೆಗೆ ಕೂಡಲಸಂಗಮ ಬದಾಮಿ, ಮಂತ್ರಾಲಯ, ಮಹಾನಂದಿ, ಬಸವಕಲ್ಯಾಣ ಮುಂತಾದ ಸ್ಥಳಗಳಿಗೆ ಭೇಟಿ ನೀಡಬಹುದಾಗಿದೆ. ಪಾದಯಾತ್ರೆ ಹೊರಟಂತಹ ಭಕ್ತಾಧಿಗಳಿಗೆ ಶ್ರೀಶೈಲ ಜಾತ್ರೆಯಿಂದ ಮರಳಿ ಬರುವಾಗ ವಿಭಾಗದಿಂದ ವಿಶೇಷ ವಾಹನಗಳ ಸೌಲಭ್ಯ ಒದಗಿಸಲಾಗುವುದು. ಯಾತ್ರಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಾಕರಸಾ ಸಂಸ್ಥೆಯ ಚಿಕ್ಕೋಡಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಶಶಿಧರ ಎಮ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಪ್ರಸರಣ: ಸಾರ್ವಜನಿಕರ ಗಮನಕೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನಲ್ಲಿ ಕವಿಪ್ರನಿನಿಯು ಹಾಲಿ ಚಾಲ್ತಿಯಲ್ಲಿರುವ 110 ಕೆ.ವಿ 2ನೇ ವಿದ್ಯುತ್ ಪ್ರಸರಣ ಮಾರ್ಗವನ್ನು 220 ಕೆ.ವಿ ಅಥಣಿ ವಿದ್ಯುತ್ ಕೇಂದ್ರದಿಂದ 110ಕೆ.ವ್ಹಿ ಐಗಳಿ ವರೆಗೆ ಜೋಡಿ ಗೋಪುರಗಳ ಮೇಲೆ 21.493 ಕಿ.ಮೀ ಉದ್ದದ ಒಂಟಿ ಪ್ರಸರಣ ಮಾರ್ಗವನ್ನು ನಿರ್ಮಿಸಲಾಗಿದೆ.

ಸದರಿ 110 ಕೆವಿ ವಿದ್ಯುತ್ ಪ್ರಸರಣ ಮಾರ್ಗವು ಬೆಳಗಾವಿ ಜಿಲ್ಲೆಯ, ಆಥಣಿ ತಾಲೂಕಿನ ಅಥಣಿ, ಕೊಟಗೇರಿ, ಬಡಚಿ, ದೇಸಾಯಿರಟ್ಟಿ, ಎಲಿಹಡಗಲಿ, ಐಗಳಿ ಹಾಗೂ ಅಕ್ಕಪಕ್ಕದ ಹದ್ದಿನಲ್ಲಿ ಬರುವ ಹಳ್ಳಿಗಳು ಮತ್ತು ಸರಹದ್ದಿನ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಹಾಯ್ದು ಹೋಗುತ್ತದೆ.

ಸದರಿ ವಿದ್ಯುತ್ ಪ್ರಸರಣ ಮಾರ್ಗವನ್ನು ಏ.5 ಇಲ್ಲವೆ ತದನಂತರ ಯಾವುದೇ ಕ್ಷಣದಲ್ಲಿ ವಿದ್ಯುತ್‌ನ್ನು ಹರಿಬಿಡಲಾಗುವದು ಕಾರಣ ವಿದ್ಯುತ್ ಗೋಪುರಗಳನ್ನು ಹತ್ತುವುದಾಗಲಿ ಅಥವಾ ತಂತಿಗಳನ್ನು ಮುಟ್ಟುವುದಾಗಲಿ ಹಸಿರು ಟೊಂಗೆಗಳನ್ನು ಎಸೆಯುವುದಾಗಲಿ ಮತ್ತು ಲೈನ್ ಕೆಳಗಡೆ ದನಕರುಗಳನ್ನು ಕಟ್ಟುವುದಾಗಲಿ, ಗಿಡಮರಗಳನ್ನು ನೆಡುವುದಾಗಲಿ, ಮನೆ/ಗುಡಿಸಲುಗಳನ್ನು ನಿರ್ಮಿಸುವುದಾಗಲಿ ಪ್ರಾಣಾಪಾಯಕವಾಗುವುದು. ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರು ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ ಎಂದು ಬೃಹತ್ ಕಾಮಗಾರಿ ವಿಭಾಗ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಬೆಳಗಾವಿಯ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಿದ್ಯುತ್ ವ್ಯತ್ಯಯ

ಬೆಳಗಾವಿ: ಮಾ. 24 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವಿ ಎಮ್. ಕೆ. ಹುಬ್ಬಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಾಲ್ಕನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಹಿರೇಮುನವಳ್ಳಿ, ಚಿಕ್ಕಮುನವಳ್ಳಿ, ಗಾಡಿಕೊಪ್ಪ, ಜಿಕನೂರ, ಪಾರಿಶ್ವಾಡ, ಇಟಗಿ, ಬೋಗೂರ, ಬೇಡರಹಟ್ಟಿ, ಹಿರೇಹಟ್ಟಿಹೊಳಿ, ಚಿಕ್ಕಹಟ್ಟಿಹೊಳಿ ಹಾಗೂ ಕರವಿನಕೊಪ್ಪ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

33 ಕೆ.ವ್ಹಿ. ಗಂದಿಗವಾಡ ಉಪಕೇಂದ್ರದಿಂದ ಸರಬರಾಜು ಆಗುವ ಗಂದಿಗವಾಡ, ಹಿರೇ ಅಂಗ್ರೊಳ್ಳಿ, ಚಿಕ್ಕ ಅಂಗ್ರೊಳ್ಳಿ, ಹಂದೂರ, ಕೇರವಾಡ, ಹುಲಿಕೊತ್ತಲ, ಇಟಗಿ, ಬೋಗೂರ, ಬೇಡರಹಟ್ಟಿ, ತೊಲಗಿ, ಬಿಳಕಿ, ಅವರೊಳ್ಳಿ ಹಾಗೂ ಕಗ್ಗಣಗಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಕಾರ್ಯ ಮತ್ತು ಪಾಲನಾ ಗ್ರಾಮೀಣ ವಿಭಾಗ, ಹುವಿಸಕಂನಿ ಕಾರ್ಯನಿರ್ವಾಹಕ ಇಂಜಿನೀಯರರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಸಭೆ ಚುನಾವಣೆ: ಮೊದಲ ಹಂತದ ಇವಿಎಂ ರ್‍ಯಾಂಡಮೈಜೇಷನ್

# ಮತಕ್ಷೇತ್ರವಾರು ಇವಿಎಂ ಹಂಚಿಕೆ ಪ್ರಕ್ರಿಯೆ ಪೂರ್ಣ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದ ಮಾರ್ಗಸೂಚಿ ಅನ್ವಯ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಇವಿಎಂ ಮತಯಂತ್ರಗಳ ಮೊದಲ ಹಂತದ ಯಾದೃಚ್ಛೀಕರಣ (ರ್‍ಯಾಂಡಮೈಜೇಷನ್) ಪ್ರಕ್ರಿಯೆ ನಡೆಸಲಾಯಿತು.



ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಮಾ.22) ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಜೊತೆಗೆ ರ್‍ಯಾಂಡ ಮೈಜೇಷನ್ ನಡೆಸಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ರ್‍ಯಾಂಡ ಮೈಜೇಷನ್ ಪ್ರಕ್ರಿಯೆ ಮೂಲಕ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ವಿಧಾನಸಭಾ ಮತಕ್ಷೇತ್ರವಾರು ಹಂಚಿಕೆ ಮಾಡಲಾಗುವುದು. ಹೀಗೆ ಅಂತಿಮಗೊಳಿಸಲಾದ ಮತಯಂತ್ರಗಳ( ಇವಿಎಂ) ಪಟ್ಟಿಯನ್ನು ಸಹಾಯಕ ಚುನಾವಣಾಧಿಕಾರಿಗಳು ಮತ್ತು ತಹಶೀಲ್ದಾರುಗಳಿಗೆ ಕಳುಹಿಸಿಕೊಡಲಾಗುವುದು ಎಂದು ತಿಳಿಸಿದರು.

ಸಂದರ್ಭದಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ್ ಶಿಂಧೆ, ವಿವಿಧ ಪಕ್ಷಗಳ ಪ್ರತಿನಿಧಿಗಳು ಸೇರಿದಂತೆ ಮತ್ತಿತರು ಹಾಜರಿದ್ದರು.

**5874 ಬಿಯು, ಕಂಟ್ರೋಲ್ ಯುನಿಟ್ ಹಂಚಿಕೆ:**

ಇವಿಎಂ ಮತಯಂತ್ರಗಳ ಮೊದಲ ಹಂತದ ರ್‍ಯಾಂಡಮೈಜೇಷನ್ ಪ್ರಕ್ರಿಯೆ ಮೂಲಕ ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಲಭ್ಯವಿರುವ ಮತಯಂತ್ರಗಳನ್ನು ಶೇ.130ರ ಪ್ರಮಾಣದಲ್ಲಿ 5874 ಬ್ಯಾಲೆಟ್ ಯುನಿಟ್; 5874 ಕಂಟ್ರೋಲ್ ಯುನಿಟ್‌ಮತ್ತು 5874 ವಿವಿಪ್ಯಾಟ್ ಯಂತ್ರಗಳನ್ನು ಹಂಚಿಕೆ ಮಾಡಲಾಯಿತು.

ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಯಾಗಿರುವ ಮತಯಂತ್ರಗಳನ್ನು ಮುಂದಿನ ಹಂತದ ರ್‍ಯಾಂಡಮೈಜೇಷನ್ ಸಂದರ್ಭದಲ್ಲಿ ಮತಗಟ್ಟೆವಾರು ಹಂಚಿಕೆ ಮಾಡಲಾಗುತ್ತದೆ.

## ಕೋಲಾರದಲ್ಲಿ ಆಸ್ತಿ ಖರೀದಿ ಮಾಡಿದ ಬಹುಭಾಷಾ ನಟ ಪ್ರಭುದೇವ



ಬೆಂಗಳೂರು: ಬಹುಭಾಷಾ ನಟ ಪ್ರಭುದೇವ ಅವರು ಚಿನ್ನದ ಗಣಿ ನಾಡಿನಲ್ಲಿ ಆಸ್ತಿ ಖರೀದಿ ಮಾಡಿದ್ದಾರೆ. ಈ ವಿಚಾರವಾಗಿ ಕೋಲಾರಕ್ಕೆ ಆಗಮಿಸಿದ ನಟ ಪ್ರಭುದೇವ ನಿನ್ನೆ ಮಾಸ್ಕ್ ಹಾಗೂ ಕ್ಯಾಪ್ ಧರಿಸಿ ಬಂದು ಅಚ್ಚರಿ ಮೂಡಿಸಿದ್ದಾರೆ. ಕೋಲಾರ ಜಿಲ್ಲೆಯ ಬಂಗಾರಪೇಟೆ ಪಟ್ಟಣದ ಸಬ್ ರಿಜಿಸ್ಟ್ರಾರ್ ಕಚೇರಿಗೆ ಸಿಂಪಲ್ ಆಗಿ ಬಂದ ನಟ ಪ್ರಭುದೇವ ಕಂಡ ಅಭಿಮಾನಿಗಳು ಕೆಲಕಾಲ ದಂಗಾಗಿದ್ದಾರೆ.

ಯಾರಿಗೂ ತಿಳಿಯದಂತೆ ಸಬ್ ರಿಜಿಸ್ಟ್ರಾರ್ ಕಚೇರಿಗೆ ಆಗಮಿಸಿದ ಪ್ರಭುದೇವ ಸಹಿ ಮಾಡಿ, ಫೋಟೋ ಕೊಟ್ಟು ತೆರಳಿದ್ದಾರೆ. ತಾಲ್ಲೂಕು ಕಚೇರಿ ಎದುರು ಕಾರ್‌ನಲ್ಲಿ ಇಳಿದ ಪ್ರಭುದೇವ ಮಾಸ್ಕ್ ಹಾಗೂ ಕ್ಯಾಪ್ ಧರಿಸಿ ಬಂದು ಅಚ್ಚರಿ ಮೂಡಿಸಿದ್ದರು. ಉಪ ನೊಂದಣಾಧಿಕಾರಿ ಕಚೇರಿಯಲ್ಲಿ ಫೋಟೊ ಕೊಟ್ಟು, ಸಹಿ ಮಾಡಿ ತೆರಳಿದ್ದಾರೆ.

ಇನ್ನೂ ಪ್ರಭುದೇವ ಬರೋದರ ಕುರಿತು ಮೊದಲೇ ಅಧಿಕಾರಿಗಳಿಗೆ ಗೌಪ್ಯತೆ ಕಾಪಾಡಿಕೊಳ್ಳುವಂತೆ ಸೂಚನೆ ನೀಡಲಾಗಿತ್ತು. ಆದರೆ ನಟ ಬರೋದನ್ನು ಕಾದು ಕುಳಿತಿದ್ದ ಕೆಲ ಅಭಿಮಾನಿಗಳು ಅವರ ಫೋಟೋ ತೆಗೆದುಕೊಂಡು ಖುಷಿಪಟ್ಟಿದ್ದಾರೆ.

## ಮತದಾನ ಜಾಗೃತಿಗೆ ಸಹಿ ಸಂಗ್ರಹಣಾ ಅಭಿಯಾನ

ಹುಕ್ಕೇರಿ: ಸಾರ್ವತ್ರಿಕ ಲೋಕಸಭೆ ಚುನಾವಣೆ ಹಿನ್ನಲೆಯಲ್ಲಿ ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ಗುರುವಾರ ಮತದಾನ ಜಾಗೃತಿಗಾಗಿ ಸಹಿ ಸಂಗ್ರಹಣಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು.




ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ತಾಪಂ ಇಒ ಟಿ.ಆರ್. ಮಲ್ಲಾಡದ ಅವರು ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, ಮತಪಟ್ಟಿಯಲ್ಲಿ ಇರುವ ಪ್ರತಿಯೊಬ್ಬರೂ ಮೇ 7 ರಂದು ಕಡ್ಡಾಯವಾಗಿ ಮತ ಚಲಾವಣೆ ಮಾಡಬೇಕು. ಈ ಕುರಿತು ಇತರರಿಗೂ ಮತದಾನ ಮಹತ್ವದ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಬೇಕು ಎಂದರು.

ಉದ್ಯೋಗ ಖಾತರಿ ಸಹಾಯಕ ನಿರ್ದೇಶಕ ಲಕ್ಷ್ಮೀನಾರಾಯಣ ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿ, ಮತದಾರರ ಪಟ್ಟಿಯಲ್ಲಿ ಹೆಸರು ಇರುವುದನ್ನು ಖಚಿತಪಡಿಸಬೇಕು. ಮತದಾರರ ಗುರುತಿನ ಚೀಟಿ ಮಾಡಲು ಯಾರಾದರು ಉಳಿದಿದ್ದರೆ ತಕ್ಷಣ ಅರ್ಜಿ ಸಲ್ಲಿಸಬೇಕು ಎಂದರು. ತಾಲೂಕಾ ಯೋಜನಾಧಿಕಾರಿ ಪ್ರಶಾಂತ ಮುನ್ನೋಳಿ, ವ್ಯವಸ್ಥಾಪಕ ಅವಿನಾಶ ಹೊಳೆಪ್ಪಗೋಳ, ವಸತಿ ವಿಷಯ ನಿರ್ವಾಹಕ ಶಂಕರ ಕಾಂಬಳೆ, ತಾಂತ್ರಿಕ ಸಂಯೋಜಕ ಅರ್ಷದ ನೇರ್ಲಿ, ಎಂಐಎಸ್ ಸಂಯೋಜಕ ಶಂಕರ ಶಿರಗುಪ್ಪಿ, ಐಇಸಿ ಸಂಯೋಜಕ ಮಹಾಂತೇಶ ಬಾದವನಮಠ, ಪಿಡಿಒಗಳಾದ ಸಾವಿತ್ರಿ ಬ್ಯಾಕೂಡ, ವಿಜಯ ದಿವಟಗಿ, ಸಿಬ್ಬಂದಿಗಳಾದ ರವಿ ಕಂಕಣವಾಡಿ, ಐ.ಎನ್.ಪಾಟೀಲ, ಶೇಖರ ಢಾಂಗೆ, ವಿಶ್ವನಾಥ ಜಗದಾಳೆ ಮತ್ತಿತರರು ಇದ್ದರು.

## ಹೋಳಿ–ರಂಜಾನ್ ಶಾಂತಿ ಸೌಹಾರ್ದತೆಯಿಂದ ಆಚರಿಸಿ: ಸಿಪಿಐ ಎಂ. ಎಂ. ದಪ್ಪಿನ

ಚನ್ನಮ್ಮನ ಕಿತ್ತೂರು: ಐತಿಹಾಸಿಕ ಚನ್ನಮ್ಮನ ಕಿತ್ತೂರು ಶಾಂತಿ ಸೌಹಾರ್ದತೆಗೆ ಹೆಸುರುವಾಸಿಯಾದ ಪಟ್ಟಣ. ಪಟ್ಟಣದಲ್ಲಿ ಹಿಂದೂ ಮುಸ್ಲಿಂ ಬೇದ ಭಾವ ಇಲ್ಲದೆ ಶಾಂತಿ ಸೌಹಾರ್ದತೆಯಿಂದ ಹೋಳಿ ಮತ್ತು ರಂಜಾನ್ ಹಬ್ಬಗಳನ್ನು ಆಚರಿಸಬೇಕು ಎಂದು ಸಿಪಿಐ ಎಂ. ಎಂ. ದಪ್ಪಿನ ಹೇಳಿದರು.



ಸ್ಥಳೀಯ ಪೊಲೀಸ್ ಠಾಣೆ ಆವರಣದಲ್ಲಿ ಹೋಳಿ ಮತ್ತು ರಂಜಾನ್ ಹಬ್ಬದ ಪ್ರಯುಕ್ತ ಏರ್ಪಡಿಸಿದ ಶಾಂತಿ ಪಾಲನಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಬ್ಬಗಳನ್ನು ನಮ್ಮ ಭಾರತಿಯ ಸಂಸ್ಕೃತಿ ಪ್ರಕಾರ ಆಚರಿಸಬೇಕು. ನಮಗೆ ಗೊತ್ತು ಇರುವ ವ್ಯಕ್ತಿಗಳಿಗೆ ಮಾತ್ರ ಬಣ್ಣವನ್ನು ಹಾಕಬೇಕು. ಈ ಭಾರಿ ಲೋಕಸಾಭಾ ಚುನಾವಣೆ ಇರುವುದರಿಂದ ಎಲ್ಲ ಕಡೆಗಳಲ್ಲಿ ಮಾದರಿ ನೀತಿ ಸಂಹಿತೆ ಜಾರಿ ಇದ್ದು ಎಲ್ಲರೂ ಕಾನೂನು ಪಾಲನೆ ಮಾಡಬೇಕು ಎಂದರು.

ಈ ವೇಳೆ ಪಿಎಸ್‌ಐ ಪ್ರವೀಣ ಗಂಗೋಳ ಮಾತನಾಡಿ ಈ ಬಾರಿ ದೇಶದಾದ್ಯಂತ ಲೋಕಸಾಭಾ ಚುನಾವಣೆ ಮತ್ತು ಎಸ್‌ಎಸ್‌ಎಲ್ಸಿ ಪರೀಕ್ಷೆ ಏಕಕಾಲಕ್ಕೆ ಬಂದಿದ್ದು ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಂಡು ಹೋಳಿ ಹಬ್ಬವನ್ನು ಆಚರಿಸಬೇಕು. ಪ್ರತಿವರ್ಷ ಯಾವ ತರಹ ಹಬ್ಬವನ್ನು ಆಚರಿಸಲಾಗುತ್ತಿತ್ತೋ ಅದೇ ತರಹ ಎಲ್ಲ ಹೋಳಿ ಉತ್ಸವ ಸಮಿತಿಗಳು ಹೋಲಿ ಆಚರಿಸಬೇಕು ಯಾವುದೇ ತರಹದ ಬದಲಾವಣೆ ಮಾಡಬಾರದು. ಈ ಬಾರಿ ಎಸ್‌ಎಸ್‌ಎಲ್ಸಿ ಪರೀಕ್ಷೆ ಇರುವುದರಿಂದು ಡಿಜೆ ಬಳಸಲು ಅವಕಾಶ ಕೊಡುವುದಿಲ್ಲ. ಬಣ್ಣ ಹಚ್ಚಿಕೊಳ್ಳಲು ಆಸಕ್ತಿ ಇಲ್ಲದವರಿಗೆ ಒತ್ತಾಯಪೂರ್ವಕವಾಗಿ ಬಣ್ಣ ಹಚ್ಚಬಾರದು. ಎಸ್‌ಎಸ್‌ಎಲ್ಸಿ ಪರೀಕ್ಷೆ ಇರುವ ಕಾರಣ ಸಾರ್ವಜನಿಕ ವಾಹನ, ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕು. ಯಾವುದೇ ಸಮಸ್ಯೆತೊಂದರೆಯಾಗಿದ್ದಲ್ಲಿ ತಕ್ಷಣ ಪೊಲೀಸರ ಗಮನಕ್ಕೆ ತರಬೇಕು ಎಂದು ಮನವಿ ಮಾಡಿದ ಅವರು ಯಾರಾದರೂ ಕಾನೂನು ಮೀರಿ ಅಹಿತಕರ ಘಟನಗಳನ್ನು ಮಾಡಲು ಮುಂದಾದರೆ ಅಂತವರನ್ನು ಬಂದಿಸಿ ಕಾನೂನು ಕ್ರಮ ಕೈಗೊಳ್ಳಲಾಗುದು ಎಂದು ಹೇಳಿದರು.

ಈ ವೇಳೆ ದಿನೇಶ ವಳಸಂಗ, ಶಿವಾನಂದ ಹಿರೇಮಠ, ಪ.ಪಂ. ಮುಖ್ಯಾಧಿಕಾರಿ ಮಲ್ಲಯ್ಯ ಹಿರೇಮಠ ಮಾತನಾಡಿದರು.

ಇದೇ ಸಂದರ್ಭದಲ್ಲಿ ಸೋಮಶೇಖರ ಮುತ್ತೇನ್ನವರ, ಸಂಜು ಲೀಕಾಪೂರ, ಮುಸ್ತಾಕ ಸುತಗಟ್ಟಿ, ಯಲ್ಲಪ್ಪ ಮಣ್ಣವಡ್ಡರ, ಆನಂದ ಚಕಡಿ, ಶಿವಪ್ಪ ಉಡಕೇರಿ ಸೇರಿದಂತೆ ಇತರರಿದ್ದರು.

## 1.84 ಕೋಟಿ ಮೌಲ್ಯದ 1681 LED ಟಿವಿಗಳನ್ನ ಜಪ್ತಿ ಮಾಡಿದ ಪೊಲೀಸರು




ಬೆಂಗಳೂರು: ಬಿಟಿಎಂ ಲೇಔಟ್‌ನ ಗೋದಾಮುವೊಂದರಲ್ಲಿ ಸಂಗ್ರಹಿಸಿದ್ದ 1.84 ಕೋಟಿ ರೂ. ಮೌಲ್ಯದ 1681 ಎಲ್‌ಇಡಿ ಟಿವಿಗಳನ್ನುಪೊಲೀಸರು ಜಪ್ತಿ ಮಾಡಿದ್ದಾರೆ.

ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಯಾವುದೇ ಅಕ್ರಮ ನಡೆಯದಂತೆ ನೋಡಿಕೊಳ್ಳಲು ಚುನಾವಣಾ ಸಿಬ್ಬಂದಿ ಹಾಗೂ ಪೊಲೀಸರು ಫುಲ್ ಅಲರ್ಟ್ ಆಗಿದ್ದಾರೆ. ಈ ಹಿನ್ನೆಲೆ ಇಂದು ಬೆಂಗಳೂರಿನ ಬಿಟಿಎಂ ಲೇಔಟ್ ನ ಗೋದಾಮಿನಲ್ಲಿ 1.84 ಕೋಟಿ ರೂ. ಮೌಲ್ಯದ 1681 ಎಲ್‌ಇಡಿ ಟಿವಿಗಳನ್ನು ವಶಪಡಿಸಿಕೊಂಡಿದ್ದಾರೆ.

## ಪಿಯು ಪರೀಕ್ಷೆ; ತಂಗಿಗೆ ನಕಲು ಮಾಡಲು ಬಿಡದ ಪೊಲೀಸ್ ಮೇಲೆ ಅಣ್ಣನಿಂದ ಹಲ್ಲೆ

ಕಲಬುರಗಿ: ತನ್ನ ತಂಗಿಗೆ ಪಿಯುಸಿ ಪರೀಕ್ಷೆಯಲ್ಲಿ ನಕಲು ಮಾಡಲು ಬಿಡದಕ್ಕೆ ಆಕ್ರೋಶಗೊಂಡ ಯುವಕನೊಬ್ಬ ಪೊಲೀಸ್ ಕಾನ್ಸ್ಟೇಬಲ್ ಮೇಲೆ ಹಲ್ಲೆ ನಡೆಸಿರುವ ಘಟನೆ ಕಲಬುರಗಿ ಜಿಲ್ಲೆಯಲ್ಲಿ ನಡೆದಿದೆ.

ಅಫಜಲಪುರ ತಾಲೂಕಿನ ಕರಜಗಿ ಪರೀಕ್ಷಾ ಕೇಂದ್ರದಲ್ಲಿ ಈ ಘಟನೆ ನಡೆದಿದ್ದು, ಘಟನೆ ದೃಶ್ಯವನ್ನು ಸ್ಥಳೀಯರು ತಮ್ಮ ಮೊಬೈಲ್ನಲ್ಲಿ ಸೆರೆ ಹಿಡಿದ್ದಾರೆ.

ರಾಜ್ಯಾದ್ಯಂತ ಪಿಯುಸಿ ಪರೀಕ್ಷೆ ನಡೆಯುತ್ತಿದ್ದು, ಇಂದು ಪರೀಕ್ಷೆಯ ಕೊನೆಯ ದಿನವಾಗಿದೆ. ಆದರೆ, ಕರಜಗಿ ಪರೀಕ್ಷಾ ಕೇಂದ್ರದಲ್ಲಿ ನಡೆದ ಪಿಯು



ಪರೀಕ್ಷೆಯಲ್ಲಿ ತನ್ನ ತಂಗಿಗೆ ನಕಲು ಮಾಡಲು ಬಿಡಲಿಲ್ಲವೆಂಬ ಕಾರಣಕ್ಕೆ ಕೇಂದ್ರದಲ್ಲಿ ಭದ್ರತಾ ಕರ್ತವ್ಯದಲ್ಲಿದ್ದ ಕಾನ್ಸ್ಟೇಬಲ್ ಪಂಡಿತ್ ಪಾಂಡ್ರೆ ಮೇಲೆ ವಿದ್ಯಾರ್ಥಿನಿಯ ಅಣ್ಣ ಕೈಲಾಸ್ ಕೋಪಗೊಂಡಿದ್ದಾನೆ.

ಅಷ್ಟಕ್ಕೂ ಸುಮ್ಮನಾಗದ ಕೈಲಾಸ್, ನನ್ನ ತಂಗಿಗೆ ನಕಲು ಮಾಡಲು ಬಿಡಲ್ವಾ ಎಂದು ಬೈದು ಕಲ್ಲಿನಿಂದ ಹಲ್ಲೆ ನಡೆಸಿದ್ದಾರೆ. ಈತನಿಗೆ ಸ್ನೇಹಿತ ಸಮೀರ್ ಕೂಡ ಸಾಥ್ ನೀಡಿದ್ದಾನೆ.

ಸ್ಥಳೀಯರು ಘಟನೆಯ ದೃಶ್ಯವನ್ನು ಮೊಬೈಲ್ ಮೂಲಕ ಸೆರೆ ಹಿಡಿದಿದ್ದಾರೆ. ಪ್ರಕರಣ ಸಂಬಂಧ ಅಫಜಲಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕೈಲಾಸ್ ಮತ್ತು ಸಮೀರ್‌ನ್ನು ಪೊಲೀಸರು ಬಂಧಿಸಿದ್ದಾರೆ.

## ಜನುಮದಿನದಂದೇ ತಲ್ವಾರ್ ಝಳಪಿಸಿ ಮಾಜಿ ಮೇಯರ್ ಪುತ್ರನ ಅಟ್ಟಹಾಸ

ಬೆಂಗಳೂರು: ಮಾಜಿ ಮೇಯರ್ ಪುತ್ರನಿಂದ ಮಾರಣಾಂತಿಕ ಹಲ್ಲೆಗೊಳಗಾಗಿದ್ದ ಯುವಕ ಚಿಕಿತ್ಸೆ ಫಲಕಾರಿಯಾಗದೆ ಬೆಂಗಳೂರಿನಲ್ಲಿ ಮೃತಪಟ್ಟಿದ್ದಾನೆ. ಮಾಜಿ ಮೇಯರ್ ನಾಗಮ್ಮನ ಮಗ ರಘು ತನ್ನ ಹುಟ್ಟುಹಬ್ಬವನ್ನ ಅದ್ದೂರಿಯಾಗಿ ಆಚರಣೆ ಮಾಡಿಕೊಳ್ಳುತ್ತಿದ್ದ ಸಂದರ್ಭದಲ್ಲಿ ಈ ಘಟನೆ ನಡೆದಿದ್ದಿ ಆರೋಪಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಮೃತ ಯುವಕನನ್ನು ತಿಪ್ಪೇಸ್ವಾಮಿ ಎಂದು ಗುರುತಿಸಲಾಗಿದ್ದು, ಮಾರ್ಚ್ 05ರಂದು ಬಳ್ಳಾರಿಯ ಹುಸೇನ್ ನಗರದಲ್ಲಿ ಈ ಘಟನೆ ನಡೆದಿತ್ತು. ತಲೆ ಭಾಗಕ್ಕೆ ದೊಣ್ಣೆಯಿಂದ ಜೋರಾಗಿ ಹೊಡೆದಿದ್ದ ಕಾರಣ ತೀವ್ರ ರಕ್ತಸ್ರಾವವಾಗಿತ್ತು ಹೀಗಾಗಿ ಗಾಯಾಳು ಯುವಕನನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿಗೆ ರವಾನಿಸಿ ಶಸ್ತ್ರ ಚಿಕಿತ್ಸೆ ಮಾಡಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಯುವಕ ಮೃತಪಟ್ಟಿದ್ದಾನೆ ಎಂದು ತಿಳಿದು ಬಂದಿದೆ.



ಬಳ್ಳಾರಿ ಮಾಜಿ ಮೇಯರ್ ನಾಗಮಮ್ಮ ಅವರ ಪುತ್ರ ರಘು ತನ್ನ ಹುಟ್ಟುಹಬ್ಬದ ಪ್ರಯುಕ್ತ ಹುಸೇನ್ ನಗರದ ತುಂಬಾ ಲೈಟಿಂಗ್, ಡಿಜೆ ಹಾಕಿಸಿ ಅದ್ದೂರಿಯಾಗಿ ಜನುಮದಿನ ಆಚರಿಸಿಕೊಳ್ಳುತ್ತಿದ್ದ. ಇದೇ ವೇಳೆ ಯುವಕ ತಿಪ್ಪೇಸ್ವಾಮಿ ತನ್ನ ಸಂಬಂಧಿಕರ ಮನೆಗೆ ಹೋಗಬೇಕು ಅಂತಾ ಬಳ್ಳಾರಿಯ ಕಪ್ಪಗಲ್ ರಸ್ತೆಯಲ್ಲಿರುವ ತನ್ನ ಮನೆಯಿಂದ ಹುಸೇನ್ ನಗರಕ್ಕೆ ಬೈಕ್ ನಲ್ಲಿ ತನ್ನ ಗೆಳೆಯರೊಂದಿಗೆ ಬಂದಿದ್ದಾನೆ.

ಈ ವೇಳೆ ದಾರಿ ಮಧ್ಯೆ ರಘು ಆಯಂಡ್ ಟೀಂ ಕೈಯಲ್ಲಿ ತಲ್ವಾರ ಹಿಡಿದು ಕೇಕ್ ಕಟ್ ಮಾಡುತ್ತಾ ಕುಣಿದು ಕುಪ್ಪಳಿಸುತಿದ್ದ ಸಮಯದಲ್ಲಿ ಸ್ವಲ್ಪ ಜಾಗ ಬಿಡಿ ನಾನು ಆ ಕಡೆ ಹೋಗಬೇಕು ಅಂತಾ ರಘು ಆಂಡ್ ಗ್ಯಾಂಗ್‌ಗೆ ಯುವಕ ತಿಪ್ಪೇಸ್ವಾಮಿ ಮನವಿ ಮಾಡಿದ್ದಾನೆ. ದಾರಿ ಬಿಡುವ ವಿಚಾರಕ್ಕೆ ಎರಡು ಗುಂಪುಗಳ ನಡುವೆ ವಾಕ್ಸಮರ ನಡೆದಿದ್ದು, ರಘು ಮತ್ತು ಸಂಘಡಿಗರು ತಿಪ್ಪೇಸ್ವಾಮಿ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಹಲ್ಲೆ ಮಾಡಿದ ಪರಿಣಾಮ ತೀವ್ರ ರಕ್ತಸ್ರಾವವಾಗಿ ತಿಪ್ಪೇಸ್ವಾಮಿ ಅಲ್ಲಿಯೇ ರಸ್ತೆಯಲ್ಲಿ ಬಿದ್ದಿದ್ದಾನೆ. ನಂತರ ಆತನನ್ನ ಹತ್ತಿರದ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಅಲ್ಲಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ರವಾನೆ ಮಾಡಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ತಿಪ್ಪೇಸ್ವಾಮಿ ಮೃತಪಟ್ಟಿದ್ದಾನೆ. ಘಟನೆ ಸಂಬಂಧ ಆರೋಪಿ ರಘು ಹಾಗೂ ಸಂಗಡಿಗರನ್ನು ಪೊಲೀಸರು ವಶಕ್ಕೆ ಪಡೆದಿದ್ದು ತನಿಖೆ ನಡೆಸುತ್ತಿದ್ದಾರೆ.

## ಲೋಕಸಭಾ ಚುನಾವಣೆ: ಸುಳ್ಳು ಮಾಹಿತಿ ಮುದ್ರಣ ನಿರ್ಬಂಧ

ಬೆಳಗಾವಿ: ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಸಂಬಂಧ ಜಿಲ್ಲೆಯಲ್ಲಿ ಮಾದರಿ ಸಂಹಿತೆ ಜಾರಿಯಾಗಿರುವ ಹಿನ್ನೆಲೆಯಲ್ಲಿ ದ್ವೇಷ ಭಾವನೆ ಕೆರಳಿಸುವಂತಹ ಬ್ಯಾನರ್, ಸುಳ್ಳು ಮಾಹಿತಿಯನ್ನು ಮುದ್ರಿಸಬಾರದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಸೂಚಿಸಿದ್ದಾರೆ.

ಬೆಳಗಾವಿ ಜಿಲ್ಲೆಯಲ್ಲಿ ಯಾವುದೇ ರೀತಿಯ ಕೋಮುಗಲಭೆ ಸೃಷ್ಟಿಸುವಂತಹ, ದ್ವೇಷ ಭಾವನೆಗಳನ್ನು ಕೇರಳಿಸುವಂತ ಬ್ಯಾನರ್, ಹೋಲ್ಡಿಂಗ್ಸಗಳಾಗಲಿ ಅಥವಾ ಕರಪತ್ರಗಳನ್ನಾಗಲಿ ಮುದ್ರಿಸುವಂತಿಲ್ಲ ಮುದ್ರಿಸಲಾದ ಅಥವಾ ಬಹುಗ್ರಾಫ್ ಮಾಡಲಾದ ಪ್ರತಿಯೊಂದು ಚುನಾವಣಾ ಕರಪತ್ರ, ಫಲಕ, ಭಿತ್ತಿಪತ್ರ, ಅಥವಾ ಫೋಸ್ಟರ್ ಮುಂಭಾಗದಲ್ಲಿ ಮುದ್ರಕನ ಹೆಸರು, ವಿಳಾಸ ಮತ್ತು ಪ್ರಕಾಶಕ ಹೆಸರು, ವಿಳಾಸವನ್ನು ಕಡ್ಡಾಯವಾಗಿ ಹೊಂದಿರಬೇಕು.

ಅಂತಹ ಯಾವುದೇ ಡಾಕ್ಯುಮೆಂಟ್‌ನ ಮುಂದ್ರಣವು ಉದ್ದೇಶಿತ ಪ್ರಕಾಶಕರಿಂದ ಸಹಿ ಮಾಡಲ್ಪಟ್ಟ ಮತ್ತು ಅವನು ವ್ಯಕ್ತಿವಾಗಿ ತಿಳಿದಿರುವ ಇಬ್ಬರು ವ್ಯಕ್ತಿಗಳಿಂದ ದೃಢೀಕರಿಸಲ್ಪಟ್ಟ ಅವನ ಗುರುತಿನ ಘೋಷಣೆಯನ್ನು ದ್ವಿ–ಪ್ರತಿಯಲ್ಲಿ ಪಡೆಯಬೇಕು.

ಯಾವುದೇ ನಿಬಂಧನೆಗಳನ್ನು ಉಲ್ಲಂಘಿಸಿದರೆ ಐಪಿಸಿ ಸೆಕ್ಷನ್ 188 ಅಡಿ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲಾಗುವುದು ಎಂದು ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಸೂಚಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089